ಸಂಪಾದಕರು: ರವಿಕುಮಾರ್ ಸಿ.ಹೆಚ್.
RNI: KARKAN/2021/80805
ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYA PRAGATHI Kannada daily
SP NEWS ಡಿಜಿಟಲ್ ನ್ಯೂಸ್ ಕಹಾನಿ
ಪ್ರತಿ ಸುದ್ದಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume:05 ಸಂಪುಟ: 05 Issue:193 ಸಂಚಿಕೆ: 193 Date:23-08-2026 Sunday RNI NO : KARKAN/2021/80805 L2/RNP-1285/TMR/2025-27 Page :4 ಪುಟ : 4 Price: 1.00 ಬೆಲೆ: 1.00 ರೂ

## ಅಹಿಂದ ವರ್ಗ ಮತ್ತೆ ಸಂಕಷ್ಟಕ್ಕೆ ಸಿಲುಕಿಕೊಳ್ಳಬಾರದು ಎಂಬುದಷ್ಟೇ ನಮ್ಮ ಉದ್ದೇಶ

ಸೂರ್ಯಪ್ರಗತಿನ್ಯೂಸ್.ಕಾಂ




ತುಮಕೂರಿನಲ್ಲಿ "ಎಸ್‌ಐಆರ್: ಇದು ಮತದಾರರ ಪಟ್ಟಿ ಪರಿಷ್ಕರಣೆಯಲ್ಲ, ಮತಾಧಿಕಾರ ಹರಣ" ಕುರಿತ ಕಾರ್ಯಾಗಾರದಲ್ಲಿ ಡಿಸಿಎಂ ಡಾ.ಜಿ.ಪರಮೇಶ್ವರ ಮಾತು ತುಮಕೂರಿನ ಅಗಳಕೋಟೆಯ ಡಾ. ಹೆಚ್.ಎಂ.ಗಂಗಾಧರಯ್ಯ ಮೆಮೋರಿಯಲ್ ಹಾಲ್‌ನಲ್ಲಿ ಜಿಲ್ಲಾ ಕಾಂಗ್ರೆಸ್ ವತಿಯಿಂದ ಆಯೋಜಿಸಿದ್ದ "ಎಸ್‌ಐಆರ್: ಇದು ಮತದಾರರ ಪಟ್ಟಿ ಪರಿಷ್ಕರಣೆಯಲ್ಲ, ಮತಾಧಿಕಾರ ಹರಣ" ಕುರಿತ ಕಾರ್ಯಾಗಾರದಲ್ಲಿ ಉಪಮುಖ್ಯಮಂತ್ರಿಗಳಾದ ಡಾ. ಜಿ.ಪರಮೇಶ್ವರ ಅವರು ಪಾಲ್ಗೊಂಡು ಮಾತನಾಡಿದರು.

ಶೇ.50ರಷ್ಟು ಜನರಿಗೆ ಮಾತ್ರ ಎಸ್‌ಐಆರ್ ಮಹತ್ವ ಅರ್ಥವಾಗಿದೆ. ಎಸ್‌ಐಆರ್ ಪ್ರಕ್ರಿಯೆಯನ್ನು ಪ್ರಾಮಾಣಿಕವಾಗಿ ನಡೆಸುವಂತೆ ಮುಖ್ಯಮಂತ್ರಿಗಳು ಪ್ರತಿಯೊಂದು ಸಭೆಯಲ್ಲಿಯೂ ಜಿಲ್ಲಾ ಉಸ್ತುವಾರಿ ಸಚಿವರುಗಳಿಗೆ ಮತ್ತು ಅಧಿಕಾರಿಗಳಿಗೆ ಸೂಚನೆಯನ್ನು ನೀಡಿದ್ದಾರೆ ಎಂದರು.

ಲಕ್ಷಾಂತರ ಇನ್ಯೂಮರೇಶನ್ ಫಾರ್ಮ್‌ಗಳನ್ನು ಭರ್ತಿ ಮಾಡಿ ವಾಪಸ್ ಕೊಟ್ಟಿಲ್ಲ. ಪಶ್ಚಿಮ ಬಂಗಾಳದಲ್ಲಿ 97 ಲಕ್ಷ ಮತದಾರರನ್ನು ಬಿಟ್ಟಿದ್ದಕ್ಕೆ, ಮಮತಾ ಬ್ಯಾನರ್ಜಿ ಅವರ ಪಕ್ಷ ಸೋಲನ್ನು ಅನುಭವಿಸಿತು. ಎಸ್‌ಐಆರ್‌ನ ಗಾಂಭೀರ್ಯತೆ ಈಗ ಅರ್ಥವಾಗುವುದಿಲ್ಲ. ಕೆಲವು ಸಮುದಾಯಗಳನ್ನು ಉದ್ದೇಶಪೂರ್ವಕವಾಗಿ ತೆಗೆದು ಹಾಕುವುದು ಅಷ್ಟರ ಮಟ್ಟಿಗೆ ಸಾಧ್ಯವಾಗಿಲ್ಲ. ಕಾಂಗ್ರೆಸ್ ಪಕ್ಷಕ್ಕೆ ಬರುವ ಮತಗಳನ್ನು ಮತದಾರರ ಪಟ್ಟಿಯಿಂದ ತೆಗೆದು ಹಾಕುವ ಬಿಜೆಪಿ ಉದ್ದೇಶ ಯಶಸ್ವಿಯಾಗಿಲ್ಲ. ಆದಾಗ್ಯೂ 1.7 ಕೋಟಿ ಮತದಾರರು ಲೆಕ್ಕಕ್ಕೆ ಸಿಕ್ಕಿಲ್ಲ ಎಂದು ಹೇಳಿದರು.

ಮುಂದುವರೆದು, ನೋಟಿಸ್ ಬಂದಿರುವವರು ಫಾರ್ಮ್‌ಗಳನ್ನು ಭರ್ತಿ ಮಾಡಿ ಕೊಡಬೇಕು. ಈ ಪ್ರಕ್ರಿಯೆ ಆಗದೆ ಹೋದರೆ ಮತದಾರರ ಪಟ್ಟಿಯಿಂದ ಶಾಶ್ವತವಾಗಿ ನಿಮ್ಮನ್ನು ಕೈಬಿಡುವ ಸಾಧ್ಯತೆ ಇರುತ್ತದೆ. ಎಸ್‌ಐಆರ್ ಪ್ರಕ್ರಿಯೆಯ ತೊಂದರೆಯಲ್ಲಿ ಸಿಲುಕಿಕೊಳ್ಳುವುದು ಬೇಡ. ಮತದಾನದ ಹಕ್ಕು ಕಳೆದುಕೊಂಡರೆ ಸರ್ಕಾರದ ಸವಲತ್ತುಗಳು ಸಿಗುವುದಿಲ್ಲ. ಇದನ್ನು ಮನಸ್ಸಲ್ಲಿಟ್ಟುಕೊಂಡು ಕೆಲಸ ಮಾಡಿದರೆ ಅನುಕೂಲವಾಗುತ್ತದೆ ಎಂದು ತಿಳಿಸಿದರು.

2029ರ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಗೆದ್ದು, ರಾಹುಲ್ ಗಾಂಧಿ ಅವರು ಪ್ರಧಾನಿಯಾಗಲೇಬೇಕು. ಕೇಂದ್ರದಲ್ಲಿ ನಮ್ಮ ಸರ್ಕಾರ ಅಸ್ತಿತ್ವಕ್ಕೆ ಬಂದರೆ ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ಬರುತ್ತದೆ. ಹೀಗಾಗಿ ಎಸ್‌ಐಆರ್ ಪ್ರಾಮುಖ್ಯತೆಯನ್ನು ಅರ್ಥ ಮಾಡಿಕೊಳ್ಳಬೇಕಿದೆ. ಎಚ್ಚರಿಕೆ ವಹಿಸಿ ಕನಿಷ್ಠ 50 ಲಕ್ಷ ಮತದಾರರನ್ನು ವಾಪಸ್ ಸೇರಿಸುವ ಕೆಲಸ ಮಾಡಿದರೆ ಉತ್ತಮ ಎಂದರು.

ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ ನಾಯಕತ್ವವನ್ನು ಯಾರೇ ವಹಿಸಿಕೊಳ್ಳಲಿ, ನಮಗೆ ಮುಖ್ಯವಾಗಿ ಪಕ್ಷ ಉಳಿಯಬೇಕು. ಪಕ್ಷ ಉಳಿದರೆ ಬಡವರು, ಶೋಷಿತರು, ಹಿಂದುಳಿದವರು ಮತ್ತು ಅಲ್ಪಸಂಖ್ಯಾತರಿಗೆ ಅನುಕೂಲವಾಗುತ್ತದೆ. ಅಹಿಂದ ವರ್ಗ ಮತ್ತೇ ಕಷ್ಟಕ್ಕೆ ಸಿಲುಕಿಕೊಳ್ಳಬಾರದು ಎಂಬುದೇ ನಮ್ಮ ಉದ್ದೇಶ ಎಂದು ಹೇಳಿದರು




ಉಪಮುಖ್ಯಮಂತ್ರಿಗಳು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಜಿ.ಪರಮೇಶ್ವರ ಅವರು 2025-26ನೇ ಸಾಲಿನ ಲೆಕ್ಕ ಶೀರ್ಷಿಕೆ 5054ರಡಿ ಕೆಆರ್‌ಐಡಿಎಲ್ ಮೂಲಕ ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಹೆಗ್ಗೆರೆ ಗ್ರಾಮದಲ್ಲಿ ಎಂಟು ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳುತ್ತಿರುವ ಗ್ರಾಮೀಣ ರಸ್ತೆ ಅಭಿವೃದ್ಧಿ ಮತ್ತು ಸೇತುವೆ ಕಾಮಗಾರಿಗಳಿಗೆ ಭೂಮಿಪೂಜೆಯನ್ನು ನೆರವೇರಿಸಿದರು.

ತುಮಕೂರು ಗ್ರಾಮಾಂತರ ಶಾಸಕರಾದ ಬಿ.ಸುರೇಶ್‌ಗೌಡ, ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಕಾಡುಗೊಲ್ಲ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಹೇಶ್ ಅವರು ಇದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

## ಬುಗುಡನಹಳ್ಳಿ ಕೆರೆಗೆ ಹೇಮಾವತಿ ನೀರು:

### ಅಧಿಕಾರಿಗಳೊಂದಿಗೆ ಬುಗಡನಹಳ್ಳಿ ಕೆರೆ ವೀಕ್ಷಿಸಿದ ಡಿಸಿಎಂ ಡಾ ಜಿ ಪರಮೇಶ್ವರ್

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ಮಳೆಯ ಕೊರತೆಯಿಂದ ಡೆಡ್ ಸ್ಟೋರೇಜ್ ತಲುಪಿದ್ದ ತುಮಕೂರು ನಗರದ ಪ್ರಮುಖ ಕುಡಿಯುವ ನೀರಿನ ಮೂಲವಾದ ಬುಗುಡನಹಳ್ಳಿ ಕೆರೆಗೆ ಹೇಮಾವತಿ ಜಲಾಶಯದಿಂದ ನೀರು ಹರಿದು ಬರುತ್ತಿರುವ ಹಿನ್ನೆಲೆಯಲ್ಲಿ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರು ಶನಿವಾರ ಸಂಜೆ ಕೆರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಹಾಸನ ಜಿಲ್ಲೆಯ ಗೊರೂರು ಹೇಮಾವತಿ ಜಲಾಶಯದಿಂದ ಕಳೆದ ಎರಡು ದಿನಗಳಿಂದ ಬುಗುಡನಹಳ್ಳಿ ಕೆರೆಗೆ ನೀರು ಹರಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಕೆರೆಯ ನೀರಿನ ಮಟ್ಟ ಹಾಗೂ ನೀರು ಹರಿವಿನ ಕುರಿತು ಅಧಿಕಾರಿಗಳಿಂದ ಡಿಸಿಎಂ ಮಾಹಿತಿ ಪಡೆದರು.

ಬಳಿಕ ಮಾತನಾಡಿದ ಡಾ. ಜಿ. ಪರಮೇಶ್ವರ್, ಬುಗುಡನಹಳ್ಳಿ ಕೆರೆಯಲ್ಲಿ ನೀರಿನ ಮಟ್ಟ ಕಡಿಮೆಯಾಗಿತ್ತು. ಹೇಮಾವತಿ ಜಲಾಶಯದಲ್ಲಿ ನೀರು ಲಭ್ಯವಿರುವ ಹಿನ್ನೆಲೆಯಲ್ಲಿ ತುಮಕೂರು ನಗರಕ್ಕೆ ಮುಂದಿನ ಮೂರೂವರೆ ತಿಂಗಳ ಕುಡಿಯುವ ನೀರಿನ ಅಗತ್ಯವಿದೆ ಎಂದು ಮನವಿ ಮಾಡಿದ್ದರಿಂದ ನೀರು ಬಿಡಲಾಗಿದೆ ಎಂದು ತಿಳಿಸಿದರು.

ಮತ್ತೆ ಡಿಸೆಂಬರ್ ವೇಳೆಗೆ ನೀರು ಅಗತ್ಯವಾಗಲಿದ್ದು, ಕೆರೆಯನ್ನು ತುಂಬಿಸಿಕೊಂಡರೆ ಮುಂದಿನ ಮೇ ಜೂನ್ ವರೆಗೆ ನಗರದ ಕುಡಿಯುವ ನೀರಿನ ಸಮಸ್ಯೆ ಎದುರಾಗುವುದಿಲ್ಲ. ಹೇಮಾವತಿ ನೀರು



ಬಂದಿರುವುದು ಸಂತಸದ ಸಂಗತಿ ಎಂದರು.

ಕುಡಿಯುವ ನೀರಿಗೆ ಮಾತ್ರ ಬಳಕೆ:

ಈ ಬಾರಿ ಬರಗಾಲದ ಪರಿಸ್ಥಿತಿ ಇರುವುದರಿಂದ ಬುಗುಡನಹಳ್ಳಿ ಕೆರೆಗೆ ಹರಿದು ಬರುವ ನೀರನ್ನು ಕುಡಿಯುವ ನೀರಿನ ಉದ್ದೇಶಕ್ಕೆ ಮಾತ್ರ ಬಳಸಬೇಕು. ಯಾವುದೇ ಕಾರಣಕ್ಕೂ ಕೃಷಿ ಚಟುವಟಿಕೆಗಳಿಗೆ ನೀರನ್ನು ಬಳಸಬಾರದು ಎಂದು ಸಾರ್ವಜನಿಕರಲ್ಲಿ ಡಿಸಿಎಂ ಮನವಿ ಮಾಡಿದರು..

ತುಮಕೂರು ಮಹಾನಗರ ಪಾಲಿಕೆ ಆಯುಕ್ತೆ ಬಿ. ಶುಭ ಮಾತನಾಡಿ, ಹೇಮಾವತಿ ಜಲಾಶಯದಿಂದ ನೀರು ಬಿಡಲಾಗಿದ್ದು, ಆಗಸ್ಟ್ 27ರವರೆಗೆ ನೀರು ಹರಿಸುವ ಸಾಧ್ಯತೆಯಿದೆ. ಸುಮಾರು 100 ಎಂಸಿಎಫ್‌ಟಿ ನೀರು ಬಂದರೂ ತುಮಕೂರು ನಗರದ ಜನರಿಗೆ ಜನವರಿವರೆಗೆ ಯಾವುದೇ ಆತಂಕವಿಲ್ಲದೆ ಕುಡಿಯುವ ನೀರು ಪೂರೈಸಲು ಸಾಧ್ಯವಾಗಲಿದೆ ಎಂದು ಹೇಳಿದರು.

ಹೇಮಾವತಿ ನೀರನ್ನು ಪಂಪ್ ಅಥವಾ ಮೋಟರ್‌ಗಳ ಮೂಲಕ ಕೃಷಿಗೆ ಬಳಸಬಾರದು. ಕುಡಿಯುವ ನೀರಿಗೆ ಮಾತ್ರ ಬಳಕೆ ಮಾಡಬೇಕು ಎಂದು ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಡಿಸಿಎಂ ಡಾ. ಜಿ. ಪರಮೇಶ್ವರ್ ಅವರೊಂದಿಗೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಮಹಾನಗರ ಪಾಲಿಕೆ ಆಯುಕ್ತೆ ಬಿ. ಶುಭ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಕೆ.ವಿ. ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು..

## ಬಿಡದಿ ಟೌನ್‌ಶಿಪ್ ಯೋಜನೆ ಕೈಬಿಡದಿದ್ದರೆ ರಾಜ್ಯ ವ್ಯಾಪಿ ಉಗ್ರ ಹೋರಾಟ: ರೈತ ಸಂಘದ ಜಿಲ್ಲಾಧ್ಯಕ್ಷ ಪಾವಗಡ ಪೂಜಾರಪ್ಪ ಎಚ್ಚರಿಕೆ

ಸೂರ್ಯಪ್ರಗತಿನ್ಯೂಸ್.ಕಾಂ



ಪಾವಗಡ:ಬಿಡದಿ ಟೌನ್‌ಶಿಪ್ ಯೋಜನೆಯನ್ನು ಕೂಡಲೇ ಕೈಬಿಡಬೇಕು, ಇಲ್ಲದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಲಾಗುವುದು ಎಂದು ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾಧ್ಯಕ್ಷ ಪೂಜಾರಪ್ಪ ಅವರು ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.

ಪಾವಗಡ ಪಟ್ಟಣದ ನಿರೀಕ್ಷಣಾ ಮಂದಿರದಲ್ಲಿ ಇಂದು ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಡದಿ ಭಾಗದಲ್ಲಿ ಸಣ್ಣ ರೈತರು ತಮ್ಮ ಜೀವನೋಪಾಯಕ್ಕಾಗಿ ಅವಲಂಬಿಸಿರುವ ಜಮೀನನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ರಾಜ್ಯ ಸರ್ಕಾರ ಬಿಡದಿ ಟೌನ್‌ಶಿಪ್ ಮಾಡಲು ಹೊರಟಿರುವುದು ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇದೇ ರೀತಿ ಪ್ರಮುಖ ವಿರೋಧ ಪಕ್ಷಗಳಾದ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ರಾಜಕೀಯದ ಹೆಸರಿನಲ್ಲಿ ರೈತರಲ್ಲಿ ಒಳ ಜಗಳ ಮಾಡಿ ರಾಜ್ಯ ಕಾಂಗ್ರೆಸ್ ಸರ್ಕಾರದ ರಿಯಲ್ ಎಸ್ಟೇಟ್ ದುರುದ್ದೇಶಕ್ಕೆ ಪರೋಕ್ಷವಾಗಿ ಸಹಕರಿಸುತ್ತಿವೆ. ಈ ಮೂರು ಪಕ್ಷಗಳು ಬಿಡದಿ ಟೌನ್ ಶಿಪ್ ಯೋಜನೆ ಕುರಿತ ತಮ್ಮ ತಮ್ಮ ಲೋಪಗಳನ್ನು ಮುಚ್ಚಿಕೊಳ್ಳಲು ಪ್ರಯತ್ನಿಸುತ್ತಿವೆಯೇ ಹೊರತು ರೈತರ ಭೂಮಿ ಉಳಿಸಲು ಯಾವುದೇ ಅರ್ಥಪೂಣ ಹೋರಾಟವನ್ನು ನಡೆಸುತ್ತಿಲ್ಲ. ಶಾಸನ ಸಭೆಯ ಕಲಾಪಗಳಲ್ಲೂ ಪರಿಣಾಮಕಾರಿ ಹೋರಾಟ ನಡೆಸದೇ ರಿಯಲ್ ಎಸ್ಟೇಟ್ ಕೈಗೊಂಬೆಯಂತೆ ವರ್ತಿಸುತ್ತಿವೆ ಎಂದರು.



ಸಣ್ಣ ರೈತರ ಜಮೀನು ಕಸಿದುಕೊಂಡು ಟೌನ್‌ಶಿಪ್ ನಿರ್ಮಿಸುವುದು ಎಷ್ಟರ ಮಟ್ಟಿಗೆ ಸರಿ? ಸರ್ಕಾರ ರೈತ ವಿರೋಧಿ ನೀತಿಯನ್ನು ಕೈಬಿಟ್ಟು, ಸಣ್ಣ ರೈತರ ಹಿತ ಕಾಪಾಡಬೇಕು. ಕೂಡಲೇ ಬಿಡದಿ ಟೌನ್‌ಶಿಪ್ ಯೋಜನೆಯನ್ನುಕೈಬಿಡಬೇಕು. ಒಂದು ವೇಳೆ ನಮ್ಮ ಮನವಿಗೆ ಸ್ಪಂದಿಸದಿದ್ದರೆ, ರಾಜ್ಯದ ಎಲ್ಲಾ ರೈತ ಸಂಘಗಳು ಒಗ್ಗೂಡಿ ಉಗ್ರ ಹೋರಾಟಕ್ಕೆ ಮುಂದಾಗುತ್ತೇವೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ತಾಲೂಕು ಸಂಘದ ಅಧ್ಯಕ್ಷ ಶಿವು, ರೈತ ಸಂಘದ ಪದಾಧಿಕಾರಿಗಳಾದ ಮರ್ಜನ್, ಗೋಪಾಲ್, ನರಸಿಂಹಮೂರ್ತಿ ಸೇರಿದಂತೆ ಇತರರು ಹಾಜರಿದ್ದರು.

## ದೇವರಾಜ ಅರಸು ಅವರ ತತ್ವ-ಆದರ್ಶಗಳು ಸದಾ ಪ್ರಸ್ತುತ

### ಕರ್ನಾಟಕ ಕಂಡ ಶ್ರೇಷ್ಠ ಮುತ್ಸದ್ದಿ, ಹಿಂದುಳಿದ ವರ್ಗಗಳ ಆಶಾಕಿರಣ



ಸೂರ್ಯಪ್ರಗತಿನ್ಯೂಸ್.ಕಾಂ

ತಿಪಟೂರು; ಹಿಂದುಳಿದ ವರ್ಗಗಳ ಹರಿಕಾರ ಡಿ. ದೇವರಾಜ ಅರಸು ಅವರ ತತ್ವ- ಆದರ್ಶಗಳು ಇಂದಿಗೂ ಸದಾ ಪ್ರಸ್ತುತ ಶಾಸಕ -ಕೆ. ಷಡಕ್ಷರಿ ಪ್ರತಿಪಾದನೆ. ಕರ್ನಾಟಕ ಕಂಡ ಶ್ರೇಷ್ಠ ಮುತ್ಸದ್ದಿ, ಹಿಂದುಳಿದ ವರ್ಗಗಳ ಆಶಾಕಿರಣ, ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರ 111ನೇ ಜನ್ಮ ದಿನಾಚರಣೆಯನ್ನು ಅರ್ಥ ಪೂರ್ಣವಾಗಿ ಆಚರಿಸಲಾಯಿತು

ತಾಲ್ಲೂಕು ಆಡಳಿತ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಶಾಸಕ ಕೆ. ಷಡಕ್ಷರಿ ಅವರು, ದೇವರಾಜ ಅರಸು ಅವರ ದೂರ ದೃಷ್ಟಿಯ ಆಡಳಿತ ಮತ್ತು ಸಮಾಜ ಸುಧಾರಣಾ ಕ್ರಮಗಳನ್ನು ಕೊಂಡಾಡಿದರು. ಕಾರ್ಯಕ್ರಮದಲ್ಲಿ ಡಿ. ದೇವರಾಜ ಅರಸು ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಗೌರವ ಅರ್ಪಿಸಿದ ಶಾಸಕರು, ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸಾಮಾಜಿಕ ನ್ಯಾಯ ದೊರಕಿಸಿ ಕೊಟ್ಟ ಅರಸು ಅವರ ಕೊಡುಗೆಯನ್ನು ಸ್ಮರಿಸಿದರು.

ಐತಿಹಾಸಿಕ ಭೂಸುಧಾರಣಾ ಕಾಯ್ದೆಯನ್ನು ಜಾರಿಗೆ ತರುವ ಮೂಲಕ ಭೂ ಹೀನರಿಗೆ ಭೂಮಿ ಒದಗಿಸಿ, ಅವರಲ್ಲಿ ಆತ್ಮಗೌರವ ತುಂಬಿದ ಕೀರ್ತಿ ದೇವರಾಜ ಅರಸು ಅವರಿಗೆ ಸಲ್ಲುತ್ತದೆ.

ಹಾವನೂರು ಆಯೋಗದ ವರದಿಯನ್ನು ಜಾರಿಗೊಳಿಸಿ ಶೋಷಿತ, ಹಿಂದುಳಿದ ವರ್ಗಗಳಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಸೂಕ್ತ ಪ್ರಾತಿನಿಧ್ಯ ಕಲ್ಪಿಸಿದ್ದು ಅರಸು ಅವರ ಆಡಳಿತದ ಬಹುದೊಡ್ಡ ಮೈಲಿಗಲ್ಲು.

ಜಾತಿ-ಮತ ಭೇದವಿಲ್ಲದೆ ಎಲ್ಲ ವರ್ಗಗಳ ಸಮಗ್ರ ಅಭಿವೃದ್ಧಿಗೆ ಶ್ರಮಿಸಿದ ಮಹಾನ್ ನಾಯಕರ ಆದರ್ಶಗಳನ್ನು ಇಂದಿನ ಯುವಪೀಳಿಗೆ ಹಾಗೂ ಜನಪ್ರತಿನಿಧಿಗಳು ಮೈಗೂಡಿಸಿ ಕೊಳ್ಳಬೇಕಿದೆ ಎಂದು ತಿಳಿಸಿದರು

ಕಾರ್ಯಕ್ರಮದಲ್ಲಿ ತಾಲೂಕು ಪಂಚಾಯಿತಿ ಕಾರ್ಯ ನಿರ್ವಾಹಣಾಧಿಕಾರಿ ಸುದರ್ಶನ್ ಗ್ರೇಡ್ 2 ತಹಸಿಲ್ದಾರ್ ಜಗನ್ನಾಥ್, ನಗರಸಭೆ ಆಯುಕ್ತ ವಿಶ್ವೇಶ್ವರ ಬದರಗಡೆ, ಗ್ಯಾರೆಂಟಿ ಅನುಷ್ಠಾನ ಅಧ್ಯಕ್ಷ ಮಡೆನೂರು ಕಾಂತರಾಜು, ಹಿಂದುಳಿದ ವರ್ಗಗಳ ಇಲಾಖೆ ಅಧಿಕಾರಿ ಜಲಜಾಕ್ಷಮ್ಮ ತಾಲೂಕು ಮಟ್ಟದ ಗಣ್ಯರು, ಜನಪ್ರತಿನಿಧಿಗಳು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು. ವಿದ್ಯಾರ್ಥಿಗಳಿಗೆ ಹಾಗೂ ಸಾಧಕರಿಗೆ ಇದೇ ಸಂದರ್ಭದಲ್ಲಿ ಸನ್ಮಾನ ನೆರವೇರಿಸಲಾಯಿತು.

## ಅನ್ನ, ಅಕ್ಷರ ಮತ್ತು ಆಶ್ರಯ ಮತ್ತು ಸಂಸ್ಕಾರ ಯುತ ಶಿಕ್ಷಣಕ್ಕಾಗಿ ಸಿದ್ದಗಂಗಾ ಮಠ

### ಮುರುಳೀಧರ ಹಾಲಪ್ಪ ಮನೆಗೆ ಪಾದಪೂಜೆಗೆ ಆಗಮಿಸಿದ ಸಿದ್ದಲಿಂಗ ಸ್ವಾಮೀಜಿಗಳು

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ದೇಶದಲ್ಲಿಯೇ ಅನ್ನ, ಅಕ್ಷರ ಮತ್ತು ಆಶ್ರಯಕ್ಕೆ ಹೆಸರು ವಾಸಿಯಾಗಿರುವ ಸಿದ್ದಗಂಗಾ ಮಠ, ತನ್ನ ಶೈಕ್ಷಣಿಕ ಸಂಸ್ಥೆಗಳನ್ನು ಹೊರರಾಜ್ಯ ಮತ್ತು ದೇಶಗಳಲ್ಲಿ ತೆರೆಯುವ ಮೂಲಕ ಅಲ್ಲಿನ ಭಾರತೀಯರಿಗೂ ಸಂಸ್ಕಾರಯುತ ಶಿಕ್ಷಣ ದೊರೆಯುವಂತೆ ಮಾಡಲಿ ಎಂದು ಹಾಲಪ್ಪ ಪ್ರತಿಷ್ಠಾನದ ಅಧ್ಯಕ್ಷ ಹಾಗೂ ಕೆಪಿಸಿಸಿ ಉಪಾಧ್ಯಕ್ಷ ಮುರುಳೀಧರ ಹಾಲಪ್ಪ ಮನವಿ ಮಾಡಿದ್ದಾರೆ.

ಇಂದು ಸಿದ್ದಗಂಗಾ ಮಠ್ಯಾಧ್ಯಕ್ಷರಾದ ಶ್ರೀಶ್ರೀಸಿದ್ದಲಿಂಗ ಸ್ವಾಮೀವಿಗಳು ಪಾದಪೂಜೆಗೆ ಜಯನಗರದಲ್ಲಿರುವ ಮುರುಳೀಧರ ಹಾಲಪ್ಪ ಅವರ ಮನೆಗೆ ಭೇಟಿ ನೀಡಿದ್ದ ವೇಳೆ ಶ್ರೀಗಳ ಮುಂದೆ ಕೋರಿಕೆ ವ್ಯಕ್ತಪಡಿಸಿದ ಮುರುಳೀಧರ ಹಾಲಪ್ಪ, ಸಿದ್ದಗಂಗಾ ಶಿಕ್ಷಣ ಸಂಸ್ಥೆ ಎಂದರೆ ಇಡೀ ದೇಶದಲ್ಲಿಯೇ ಗುಣಮಟ್ಟದ ಶಿಕ್ಷಣದ ಜೊತೆಗೆ, ಸಂಸ್ಕಾರಯುತ ಶಿಕ್ಷಣಕ್ಕೆ ಒಳ್ಳೆಯ ಹೆಸರಿದೆ.ಇದು ಬೇರೆ ಬೇರೆ ದೇಶದ ಜನರಿಗೂ ಲಭ್ಯವಾಗಬೇಕೆಂಬುದು ನಮ್ಮ ಇಚ್ಚೆ. ಹಾಗಾಗಿ ವಿದೇಶಗಳಲ್ಲಿಯೂ ಸಿದ್ದಗಂಗಾ ಸಂಸ್ಥೆ ತನ್ನ ಶಿಕ್ಷಣ ಸಂಸ್ಥೆ ತೆರೆದರೆ ಹೆಚ್ಚಿನ ಅನುಕೂಲವಾಗಲಿದೆ ಎಂದರು.

ಜೆಎಸ್‌ಎಸ್ ಸಂಸ್ಥೆ, ಬಿಜಿಎಸ್ ಸಂಸ್ಥೆಗಳು ಈಗಾಗಲೇ ನೆರೆಯ ರಾಷ್ಟ್ರಗಳಾದ ಬೂತಾನ್, ದೆಹಲಿ, ನೇಪಾಳಗಳಲ್ಲಿ ಶಿಕ್ಷಣ ಸಂಸ್ಥೆಗಳನ್ನು ತೆರೆದುಅಲ್ಲಿನ ಮಕ್ಕಳಿಗೆ ಔಪಚಾರಿಕ ಶಿಕ್ಷಣ ಒದಗಿಸುತ್ತಿವೆ.ಅಲ್ಲದೆ ಮುದ್ದೇನಹಳ್ಳಿಯ ಶ್ರೀಸತ್ಯಸಾಯಿ ಸೇವಾಶ್ರಮವೂ ಸಹ ರಾಜ್ಯದಲ್ಲಿ ರಾಜ್ಯದ ಎಲ್ಲಾ ಜಿಲ್ಲಾಕೇಂದ್ರ, ತಾಲೂಕು ಕೇಂದ್ರಗಳಲ್ಲಿಯೂ ಸೇವಾಶ್ರಮಗಳನ್ನು ತೆರದು ಶಿಕ್ಷಣ ನೀಡುವ ಕೆಲಸ ಮಾಡುತ್ತಿವೆ.ಸಿದ್ದಗಂಗಾ ಕ್ಷೇತ್ರಅನ್ನ, ಅಕ್ಷರ, ಆಶ್ರಯಕ್ಕೆ ಹೆಸರುವಾಸಿ, ಹಾಗಾಗಿ ಅವರು ಕರ್ನಾಟಕದ ಜೊತೆಗೆ ಬೇರೆ ರಾಜ್ಯಗಳಲ್ಲಿಯೂ ಹಾಗೂ ಹೊರ ದೇಶಗಳಲ್ಲಿಯೂ ಶಿಕ್ಷಣ ಸಂಸ್ಥೆ ತೆರೆದರೆ ಒಳ್ಳೆಯದು. ಹಾಗಾಗಿ ನಮ್ಮ ಮನವಿಯನ್ನು ಸಿದ್ದಗಂಗಾ ಶ್ರೀಗಳ ಮುಂದೆ ವ್ಯಕ್ತಪಡಿಸಿರುವುದಾಗಿ ಮುರುಳೀಧರ ಹಾಲಪ್ಪ ತಿಳಿಸಿದರು.

ಸಿದ್ದಗಂಗಾ ಮಠ ಶಿಕ್ಷಣ ಸಂಸ್ಥೆ ವಿಸ್ತರಿಸಲು ಮುಂದಾದರೆ ಅಲ್ಲಿನ ರಾಜ್ಯ ಸರಕಾರಗಳು ಸ್ಪಂದಿಸಲಿವೆ. ಹಾಗೆಯೇ ಧಾನಿಗಳು, ಹಳೆಯ ವಿದ್ಯಾರ್ಥಿಗಳು ಕೈಜೋಡಿಸುವುದರಲ್ಲಿ ಅನುಮಾನವಿಲ್ಲ. ಹಾಗಾಗಿ ನೆರೆಯ ನೇಪಾಳ, ಭೂತಾನ್, ಮಾರಿಷಸ್, ಅಮೇರಿಕ, ಇಂಗ್ಲೇಡ್‌ಗಳಲ್ಲಿಯೂ ಸಿದ್ದಗಂಗಾ ಮಠತನ್ನ ಸಂಸ್ಥೆ ಸ್ಥಾಪಿಸಬೇಕೆಂಬುದು ನನ್ನಂತಹ ಅನೇಕರ ಒತ್ತಾಯವಾಗಿದೆ. ಈ ನಿಟ್ಟಿನಲ್ಲಿ ಶ್ರೀಗಳು ಮನಸ್ಸು ಮಾಡಿದರೆ ನೆರವಿನ ಮಹಾಪೂರವೇ ಹರಿದುಬರಲಿದೆ ಎಂಬ ಆಶಾಭಾವನೆ ನಮ್ಮದಾಗಿದೆ ಎಂದು ಮುರುಳೀಧರ ಹಾಲಪ್ಪ ನುಡಿದರು.

ಪಾದಪೂಜೆ ಸ್ವೀಕರಿಸಿ,ರೈತ ಮಹಿಳೆಯರಿಗೆ ಪುರಸ್ಕರಿಸಿ ಮಾತನಾಡಿದ ಶ್ರೀಗಳು,ರಾಜ್ಯದಲ್ಲಿ ಬರವಿದೆ. ಆಗಸ್ಟ್ ತಿಂಗಳು ಮುಗಿಯುತ್ತಾ ಬಂದರೂ ಮಳೆಯಿಲ್ಲ. ಶೇಂಗಾ ಬಿತ್ತನೆ ಸಾಧ್ಯವಾಗಿಲ್ಲ. ಅಲ್ಪ, ಸ್ವಲ್ಪರಾಗಿ ಬಿತ್ತನೆಯಾಗಿದೆ. ಅದು ಮಳೆಯಿಲ್ಲದೆ ಒಣಗುತ್ತಿದೆ. ಸರಕಾರವೂ ಸಹ ಹಲವಾರು ಕ್ರಮಕೈಗೊಂಡಿದೆ. ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಒದಗಿಸುವ ನಿಟ್ಟಿನಲ್ಲಿ ತಯಾರಿ ಮಾಡಿಕೊಳ್ಳುತ್ತಿದೆ. ನಮಗೆ ದೇವಾಲಪುರ ಕೆರೆಯಲ್ಲಿ ಸ್ವಲ್ಪ ನೀರಿದೆ.ಅದನ್ನೇ ಬಳಕೆ ಮಾಡುತ್ತಿದ್ದೇವೆ. ಮಕ್ಕಳಿಗೆ ಕಡಿಮೆ ನೀರು ಬಳಕೆ ಮಾಡುವಂತಹ ಸಲಹೆ ನೀಡುತ್ತಿದ್ದೇವೆ. ಸರಕಾರ ಈ ನಿಟ್ಟಿನಲ್ಲಿಕ್ರಮ ಕೈಗೊಳ್ಳಲಿದೆ ಎಂಬ ನಂಬಿಕೆ ನಮಗಿದೆ. ಮಠ, ಮಾನ್ಯಗಳು ಸಹ ತಮ್ಮ ಶಕ್ತಿ ಮೀರಿ ಬರಕ್ಕೆ ಸ್ಪಂದಿಸುತ್ತಿವೆ ಎಂದರು.

ರಾಜ್ಯದಲ್ಲಿ ಸಾಕ್ಷರತೆ ಪ್ರಮಾಣ ಹೆಚ್ಚಾಗಿದೆ ಎಂದರೆ ಅದಕ್ಕೆ ಮಠ ಮಾನ್ಯಗಳ ಕೊಡುಗೆ ಅಪಾರವಾಗಿದೆ. ನೀರು, ಅನ್ನ, ವಿದ್ಯುತ್ ಇವುಗಳನ್ನು ಇಂತಹ ಬರಗಾಲದ ಸಂದರ್ಭದಲ್ಲಿ ಮಿತವಾಗಿ ಬಳಕೆ ಮಾಡಬೇಕಾಗಿದೆ. ಅವಿಭಕ್ತ ಕುಟುಂಬದಲ್ಲಿ ಮಕ್ಕಳಿಗೆ ಈ ಆದರ್ಶಗಳನ್ನು ಹೇಳಿಕೊಡುತ್ತಿದ್ದರು.ಆದರೆ ಇಂದು ವಿಭಕ್ತ ಕುಟುಬದಿಂದ ಮಕ್ಕಳಲ್ಲಿ ಶಿಕ್ಷಣವಿದೆಯೇ ಹೊರತು ಸಂಸ್ಕಾರವಿಲ್ಲ. ಹಾಗಾಗಿ ದಾರಿತಪ್ಪುತಿದ್ದಾರೆ.ಅವರನ್ನು ದಾರಿಗೆ ತರುವುದು ಒಂದು ಸವಾಲಿನ ಕೆಲಸವಾಗಿದೆ. ಜೆನ್ ಜಿ ಮಕ್ಕಳಿಗೆ ಶಿಕ್ಷಣದ ಜೊತೆಗೆ, ಸಂಸ್ಕಾರವೂ ಬೇಕಿದೆಎಂದು ಶ್ರೀಸಿದ್ದಲಿಂಗಸ್ವಾಮೀಜಿ ತಿಳಿಸಿದರು.

ಹಾಲಪ್ಪ ಪ್ರತಿಷ್ಠಾನದ ವತಿಯಿಂದ ಸಾಕಷ್ಟು ಒಳ್ಳೆಯ ಕೆಲಸಗಳನ್ನು ದಂಪತಿಗಳಿಬ್ಬರು ಮಾಡುತ್ತಿದ್ದಾರೆ. ಪ್ರತಿಭಾವಂತ ಮಕ್ಕಳಿಗೆ ಪುರಸ್ಕಾರ, ಪ್ರತಿಭಾವಂತ ರೈತರು, ರೈತ ಮಹಿಳೆಯರನ್ನು ಗುರುತಿಸಿ, ಅವರನ್ನು ಪ್ರೋತ್ಸಾಹಿಸುವ ಕೆಲಸ ಮಾಡುತ್ತಿರುವುದು ಶ್ಲಾಘನೀಯ.ಸಿದ್ದಗಂಗಾ ಶಿಕ್ಷಣ ಸಂಸ್ಥೆ ವಿಸ್ತರಿಸಬೇಕೆಂಬ ಮುರುಳೀಧರ ಹಾಲಪ್ಪ ಅವರ ಕೋರಿಕೆಯನ್ನು ಸದ್ಯದ ಪರಿಸ್ಥಿತಿಯಲ್ಲಿ ಈ ಡೇರಿಸುವುದು ಕಷ್ಟ.ಭೂಮಿಯ ಬೆಲೆ ಗಗನ ಮುಖಿಯಾಗಿದೆ. ಆಂಗ್ಲ ಮಾಧ್ಯಮ ಶಿಕ್ಷಣದ ಕಡೆಗೆಎಲ್ಲರ ಒಲವಿದೆ.ಹಳ್ಳಿ ಶಾಲೆಗಳು ಉಳಿಸುವುದು ದೊಡ್ಡ ಸವಾಲಾಗಿದೆಎಂದು ಶ್ರೀಸಿದ್ದಲಿಂಗಸ್ವಾಮೀಜಿ ನುಡಿದರು. ಈ ವೇಳೆ ಶ್ರೀಮತಿ ಕಲ್ಪನಾ ಹಾಗೂ ಮುರುಳೀಧರ ಹಾಲಪ್ಪ ದಂಪತಿಗಳು ಸಿದ್ದಗಂಗಾ ಶ್ರೀಗಳನ್ನು ಮಂಗಳ ವಾದ್ಯದೊಂದಿಗೆ ಬರ ಮಾಡಿಕೊಂಡು, ಪಾದ ಪೂಜೆ ನೆರವೇರಿಸಿದರು. ಹಾಲಪ್ಪ ಪ್ರತಿಷ್ಠಾನದಿಂದ ಪ್ರತಿಭಾವಂತರೈತ ಮಹಿಳೆಯರನ್ನು ಶ್ರೀಗಳು ಅಭಿನಂದಿಸಿದರು. ಈ ವೇಳೆ ಪೃಥ್ವಿರಾಜ್ ಹಾಲಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

## ಪಾವಗಡ ಶನಿಮಹಾತ್ಮ ದೇವಸ್ಥಾನಕ್ಕೆ ಸಚಿವ ಎಸ್.ಎಸ್. ಮಲ್ಲಿಕಾರ್ಜುನ, ಶಾಸಕ ಸಮರ್ಥ್

ಸೂರ್ಯಪ್ರಗತಿನ್ಯೂಸ್.ಕಾಂ



ಪಾವಗಡ:ಕರ್ನಾಟಕ ರಾಜ್ಯ ಸರ್ಕಾರದ ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಇಲಾಖೆಯ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ ಹಾಗೂ ಅವರ ಪುತ್ರ, ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಸಮರ್ಥ್ ಶಾಮನೂರು ಅವರು ಶ್ರಾವಣ ಮಾಸದ ಪ್ರಯುಕ್ತ ಪಟ್ಟಣದ ಪ್ರಸಿದ್ಧ ಶ್ರೀ ಶನಿಮಹಾತ್ಮ ದೇವಸ್ಥಾನಕ್ಕೆ ಭೇಟಿ ನೀಡಿ ದೇವರ ಆಶೀರ್ವಾದ ಪಡೆದರು.

ದೇವಸ್ಥಾನಕ್ಕೆ ಆಗಮಿಸಿದ ಸಚಿವರು ಮತ್ತು ಶಾಸಕರನ್ನು ಎಸ್.ಎಸ್.ಕೆ. ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಆತ್ಮೀಯವಾಗಿ ಸ್ವಾಗತಿಸಿ, ವಿಶೇಷ ದರ್ಶನಕ್ಕೆ ವ್ಯವಸ್ಥೆ ಮಾಡಿಕೊಟ್ಟರು. ಈ ವೇಳೆ ಧಾರ್ಮಿಕ ವಿಧಿವಿಧಾನಗಳಂತೆ ನಡೆದ ನವಗ್ರಹ ಪೂಜೆ ಹಾಗೂ ತೈಲಾಭಿಷೇಕ ಸೇರಿದಂತೆ ವಿವಿಧ ಪೂಜಾ ಕೈಂಕರ್ಯಗಳಲ್ಲಿ ಸಚಿವರು ಮತ್ತು ಶಾಸಕರು ಸಕ್ರಿಯವಾಗಿ ಪಾಲ್ಗೊಂಡಿದ್ದರು.

ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿದ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಸಚಿವರು ನಾವು ಹಲವು ವರ್ಷಗಳಿಂದ ಶ್ರಾವಣ ಮಾಸದ ಮೂರನೇ ಶನಿವಾರದಂದು ಕುಟುಂಬ ಸಮೇತರಾಗಿ ಶನಿಮಹಾತ್ಮ ದೇವಸ್ಥಾನಕ್ಕೆ ತಪ್ಪದೇ ಬಂದು ದೇವರ ದರ್ಶನ ಪಡೆಯುತ್ತಿದ್ದೆವು. ಈ ವರ್ಷ ಶ್ರಾವಣ ಮಾಸದ ಎರಡನೇ ಶನಿವಾರದಂದೇ ಆಗಮಿಸಿ ಶನಿ ದೇವರ ಕೃಪೆಗೆ ಪಾತ್ರರಾಗಿದ್ದೇವೆ,ನನ್ನ ಮಗ ಸಮರ್ಥ್ ಶಾಮನೂರು ಶಾಸಕನಾದ ಮೇಲೆ ಮೊದಲ ಬಾರಿಗೆ ಇಲ್ಲಿಗೆ ಬಂದು ದೇವರ ಆಶೀರ್ವಾದ ಪಡೆದಿದ್ದೇವೆ. ರಾಜ್ಯಾದ್ಯಂತ ಉತ್ತಮ ಮಳೆ-ಬೆಳೆಯಾಗಿ, ಜನತೆಗೆ ಒಳಿತಾಗಲಿ ಹಾಗೂ ಇಡೀ ರಾಜ್ಯ ಸಮೃದ್ಧಿಯಿಂದ ಕೂಡಿರಲಿ ಎಂದು ಭಗವಂತನಲ್ಲಿ ಪ್ರಾರ್ಥಿಸಿದ್ದೇನೆ ಎಂದು ತಿಳಿಸಿದರು

ಈ ಸಂದರ್ಭದಲ್ಲಿ ಎಸ್ ಎಸ್ ಕೆ ಸಂಘದ ಅಧ್ಯಕ್ಷರಾದ ಅನಿಲ್ ಮಾಜಿ ಅಧ್ಯಕ್ಷರಾದ ಆನಂದ್ ರಾವ್, ಪುರಸಭೆಯ ಮಾಜಿ ಅಧ್ಯಕ್ಷರಾದ ಸುರೇಶ್ ಬಾಬು, ವಿಶ್ವನಾಥ್ ಸೇರಿದಂತೆ ಸಂಘದ ಪದಾಧಿಕಾರಿಗಳು ಸಾರ್ವಜನಿಕರು ಹಾಜರಿದ್ದರು

# ಸರ್ಕಾರಿ ನೌಕರಿ ಹಿಡಿಯುವುದಕ್ಕಿಂತ ಸ್ವಾವಲಂಬಿ, ಸ್ವಂತ ಉದ್ಯಮಿಗಳಾಗುವುದು ಒಳಿತು

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಕನಕೋದ್ಯಮವೆಂಬುದು ಕೇವಲ ಹಾಲುಮತ ಸಮುದಾಯದ ಉದ್ದಿಮೆದಾರರ ಸಂಘಟನೆಯ ವೇದಿಕೆಯಲ್ಲ. ಉದ್ದಿಮೆದಾರರು ಹಾಗೂ ಗ್ರಾಹಕರ ನಡುವಿನ ಸೇತುವೆ ಯಾಗಲು ಸ್ಥಾಪಿಸಿರುವ ಸಂಘಟನೆ ಎಂದು ಕನಕೋದ್ಯಮಿ ಸಂಘಟನೆ ರಾಜ್ಯಾಧ್ಯಕ್ಷ ಸುನೀಲ್ ಜೈರಾಜ್ ತಿಳಿಸಿದರು. ಅವರು ನಗರದ ಶ್ರೀ ದೇವಿ ವೈದ್ಯಕೀಯ ಕಾಲೇಜು ಸಭಾಂಗಣದಲ್ಲಿ ಶನಿವಾರ ಹಾಲುಮತ ಉದ್ಯಮಿಗಳ ಸಂಘದ ಕನಕೋದ್ಯಮಿ ತುಮಕೂರು ಅಧ್ಯಾಯ ವಿಭಾಗದ ಲೋಕಾರ್ಪಣೆ ಸಮಾರಂಭದಲ್ಲಿ ಮಾತನಾಡಿದರು.

ಕನಕೋದ್ಯಮ ಸಂಘಟನೆ ರಾಜಕೀಯ ರಹಿತವಾದ ಉದ್ದೇಶದೊಂದಿಗೆ ಸಮುದಾಯದ ಉದ್ಯಮಿಗಳು ಪರಸ್ಪರ ನೆರವಾಗಲು ಆ ಮೂಲಕ ಗ್ರಾಹಕರನ್ನು ವೃದ್ಧಿಸಿಕೊಂಡು ವ್ಯವಹಾರ ವಿಸ್ತರಿಸಿಕೊಳ್ಳಲು ಸ್ವಾಮಿ ಯೋಗೀಶ್ವರನಂದಜೀ ಅವರ ಮಾರ್ಗದರ್ಶನದಲ್ಲಿ ನೆರವಾಗಲು ಶುರು ಮಾಡಿದ್ದು ಇಂದು ಸಾವಿರಕ್ಕೂ ಅಧಿಕಉದ್ದಿಮೆದಾರರು ಸದಸ್ಯರಾಗಿದ್ದಾರೆ. ಪ್ರಸಕ್ತ ರಾಜಧಾನಿ ಹೊರತಾಗಿ ಸಂಘಟನೆ ವಿಸ್ತರಣೆ ಯಾಗಿದ್ದರೆ ಅದು ತುಮಕೂರಿನಲ್ಲಿ. ಇಂದು ತುಮಕೂರಲ್ಲಿ ಕನಕೋದ್ಯಮ ಹೊಸ ಅಧ್ಯಾಯ ಶುರುವಾಗಿದ್ದು ರಾಜ್ಯಾದ್ಯಂತ ವಿಸ್ತರಿಸುವ ಗುರಿ ಹೊಂದಲಾಗಿದೆ. ಮುಂದಿನ ವರ್ಷ ಜನವರಿಯಲ್ಲಿ ಬೆಂಗಳೂರಲ್ಲಿ




5000 ಉದ್ಯಮಿಗಳ ಬೃಹತ್ ಸಮಾವೇಶ ಏರ್ಪಡಿಸಿ ಸಂಘಟನೆಯನ್ನು ಮತ್ತಷ್ಟು ಸದೃಢಪಡಿಸಲಾಗುವುದು ಎಂದರು.

ಕಾರ್ಮಿಕ ಇಲಾಖೆ ನಿವೃತ್ತ ಜಂಟಿ ಕಾರ್ಯದರ್ಶಿ ವಸಂತ್ ಇಟ್ಟಣಗಿ ಅವರು ಮುಖ್ಯ ಅತಿಥಿಯಾಗಿ ಮಾತನಾಡಿ ಉತ್ತರ ಕರ್ನಾಟಕ ಭಾಗದಲ್ಲಿ ಸಮುದಾಯದ ಉದ್ಯಮಿಗಳ ಸಂಖ್ಯೆ ಬೆರಳೆಣಿಕೆಯಷ್ಟಿದ್ದು ಉದ್ಯಮಶೀಲತಾ ಮನೋಭಾವವನ್ನು ವೃದ್ಧಿಸಲು ಇಂತಹ ಕನಕೋದ್ಯಮ ಸಂಘಟನೆ ಗಳು ಉತ್ತಮ ವೇದಿಕೆಯೆನಿಸಿದೆ. ಲಕ್ಷ, ಕೋಟಿಗಟ್ಟಲೇ ಹಣ ಕೊಟ್ಟು ಸರ್ಕಾರಿ ನೌಕರಿ ಹಿಡಿಯುವುದಕ್ಕಿಂತ ಸ್ವಾವಲಂಬಿ ಯಾಗಿ ಸ್ವಂತ ಉದ್ಯಮಿಗಳಾಗುವುದು ಮುಖ್ಯ. ಸಾಮಾನ್ಯ ವರ್ಗದ ಕುಟುಂಬ ದಿಂದ ಬಂದ ಸುನೀಲ್ ಜಯರಾಜ್, ಡಾ. ಎಂ. ಆರ್. ಹುಲಿನಾಯ್ಕರ್, ಎಸ್. ನಾಗಣ್ಣ ಅವರಂತಹವರ ಸಾಧನೆ ನವ್ಯೋದ್ಯಮಿಗಳಿಗೆ ಸ್ಫೂರ್ತಿ ಎಂದರು.

ಹಿರಿಯ ಸಂಪಾದಕರಾದ ಡಾ. ಎಸ್. ನಾಗಣ್ಣ ಅವರು ಸಮಾರಂಭ ಉದ್ಘಾಟಿಸಿ ಮಾತನಾಡಿ ತುಮಕೂರಿನಲ್ಲಿ ಕನಕೋದ್ಯಮ ಅಧ್ಯಾಯ ಆರಂಭವಾಗಿರುವುದು ಒಳ್ಳೆಯ ಬೆಳವಣಿಗೆ. ರಾಜ್ಯ ದಲ್ಲಿ ಮೂರನೇ ಅತಿ ದೊಡ್ಡ ಸಮುದಾಯವಾದರೂ ಔದ್ಯೋಗಿಕ ಕ್ಷೇತ್ರದಲ್ಲಿ ಬೆಳೆದಿರುವವರ ಸಂಖ್ಯೆ ಕಡಿಮೆ. ಪರಸ್ಪರ ಸಹಕಾರದೊಂದಿಗೆ ಈ ರಂಗದಲ್ಲಿ ಮುನ್ನಡೆ ಸಾಧಿಸಬೇಕಿದ್ದು ನಮ್ಮನ್ನು ಯಾರು ಬೆಳೆಸುವುದಿಲ್ಲ. ನಾವು ಬೆಳೆದಾಗ ಆಗ ಎಲ್ಲರೂ ನಮ್ಮನ್ನು ಬೆಂಬಲಿಸುತ್ತಾರೆ. ಹುಲಿನಾಯ್ಕರ್ ಅವರು ಇದಕ್ಕೆ ಜ್ವಲಂತ ಉದಾಹರಣೆ ಯಾಗಿದ್ದಾರೆಂದರು.

ಬಿಎಂಟಿಸಿ ಉಪಾಧ್ಯಕ್ಷ ನಿಖೇತ್ ರಾಜ್ ಮೌರ್ಯ ಮುಖ್ಯ ಅತಿಥಿಯಾಗಿ ಮಾತನಾಡಿ, ಯಾವುದೇ ಅಧಿಕಾರ ಸಂಘಟನೆ ಜವಾಬ್ದಾರಿ ಸಿಗಲಿ. ಅವಕಾಶ ಸಿಕ್ಕಾಗ ಸಮಾಜದ ಹಿತಕಾಯುವುದು ಮುಖ್ಯ ಈ ನಿಟ್ಟಿನಲ್ಲಿ ಕನಕೋದ್ಯಮ ಸಂಘಟನೆ ಸ್ಥಾಪನೆ ಚಿಂತನೆಯೇ ಒಂದು ಅದ್ಭುತ ಸೇವಾ ಪರಿಕಲ್ಪನೆ. ಇದನ್ನು ತುಮಕೂರಿಗೂ ತಂದಿರುವ ಮಧುಕರ್, ಧರ್ಮರಾಜ್ ಪ್ರೊ. ಕೆ. ಜಿ. ಪರಶುರಾಮ್ ಅವರ ಕಾರ್ಯ ಶ್ಲಾಘನೀಯ ವೆಂದರು.

ಇನ್ಸೈಟ್ಸ್ ಐಎಎಸ್ ಅಕಾಡೆಮಿ ಮುಖ್ಯ ಸ್ಥರಾದ ಜಿ. ಬಿ. ವಿನಯ್ ಕುಮಾರ್ ಅವರು ಮುಖ್ಯ ಅತಿಥಿಯಾಗಿ ಮಾತನಾಡಿ, ರಾಜಕೀಯ ಅಧಿಕಾರ ಇಂದು ಎಲ್ಲಾ ಅವಕಾಶ ಗಳಿಗೂ ಮೂಲವಾಗಿದ್ದು, ಉದ್ಯಮಿಗಳಾದವರು ಯುವ ನಾಯಕತ್ವ ವನ್ನು ಬೆಳೆಯಲು ಪ್ರೋತ್ಸಾಹಿಸಬೇಕು ಎಂದು ಹೇಳಿದರು. ಉದ್ಯಮಿ ಮಂಜು ಪ್ರಸಾದ್, ಶಿಕ್ಷಣ ಉದ್ಯಮಿ ರಾಮಾಂಜಿನಯ್ಯ, ಪ್ರೊ. ಕೆ. ಜಿ. ಪರಶುರಾಮ್ ತಮ್ಮ ಅನಿಸಿಕೆ ಹಂಚಿಕೊಂಡರು. ಶ್ರೀದೇವಿ ಶಿಕ್ಷಣ ಸಮೂಹದ ಸಂಸ್ಥಾಪಕ ಡಾ. ಎಂ. ಆರ್. ಹುಲಿನಾಯ್ಕರ್ ಅಧ್ಯಕ್ಷತೆ ವಹಿಸಿ ಮಾತನಾಡಿ ಕನಕೋದ್ಯಮ ಸಂಘಟನೆ ಹಾಲಮತ ಸಮುದಾಯದ ಮಂದಿ ಉದ್ಯಮ ರಂಗದಲ್ಲಿ ಬೆಳವಣಿಗೆ ಹೊಂದಲು ಸೂಕ್ತ ಅವಕಾಶ ದ ವೇದಿಕೆಯಾಗಿದೆ ಎಂದು ಹೇಳಿ ಶುಭ ಹಾರೈಸಿದರು. ಸಮಾರಂಭದ ಸಾನಿಧ್ಯವನ್ನು ರಾಮೋಹಳ್ಳಿಯ ಸ್ವಾಮಿ ಯೋಗೀಶ್ವರನಂದಜೀ ವಹಿಸಿ ಆಶೀರ್ವಚನ ನೀಡಿದರು. ಪ್ರಜಾಪ್ರಗತಿ ಸಹ ಸಂಪಾದಕ ಟಿ.ಎನ್.ಮಧುಕರ್ ಆಶಯ ನುಡಿಗಳನ್ನಾಡಿ ಸ್ವಾಗತಿಸಿದರು ಡಾ. ರಮಣ್ ಹುಲಿನಾಯ್ಕರ್. ಕವಿರತ್ನ ಕಾಳಿದಾಸ ಸಹಕಾರ ಸಂಘದ ಅಧ್ಯಕ್ಷ ಧರ್ಮರಾಜ್, ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ಟಿ. ಆರ್. ಸುರೇಶ್, ಕಾಳಿದಾಸ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಮೈಲಪ್ಪ ಹಾಗೂ ಕನಕೋದ್ಯ ಸಂಘಟನೆ ರಾಜ್ಯ ಪ್ರಧಾನ ಕಾರ್ಯದರ್ಶಿ ಆರ್. ಸುದರ್ಶನ್ ಮತ್ತಿತರರಿದ್ದರು.

೧. ತಾಳಿದವನು ಬಾಳಿಯಾನು / ಕೋಪದಲ್ಲಿ ಕೊಯ್ದ ಮೂಗು ಮತ್ತೆ ಬಂದೀತೆ?

* ಗಾದೆಗಳು ವೇದಗಳಿಗೆ ಸಮ, ಗಾದೆಗಳು ಹಿರಿಯರ ಅನುಭವದ ಮಾತುಗಳಾಗಿವೆ.

* ಇದು ಒಂದು ಜನಪ್ರಿಯ ಗಾದೆ ಮಾತಾಗಿದ್ದು; ಅತಿಯಾಗಿ ಕೋಪಮಾಡಿಕೊಳ್ಳದೆ ಸಮಾಧಾನದಿಂದ ಇರಬೇಕು. ಕೋಪ ಅನಾಹುತಕ್ಕೆ ಕಾರಣವಾಗುತ್ತದೆ ಎಂಬುದನ್ನು ತಿಳಿಸುತ್ತದೆ.

* ಕೋಪಂ ಅನರ್ಥ ಸಾಧನಂ ಎಂಬ ಮಾತಿನಂತೆ ಕೋಪವು ಕೆಡುಕನ್ನು ಉಂಟುಮಾಡುತ್ತದೆ. ಕ್ಷಣಕಾಲ ಕೋಪದ ಬುದ್ಧಿ ಕೊಟ್ಟರೆ ಅದು ನಮ್ಮನ್ನು ಮಾತ್ರವಲ್ಲದೆ ಅದಕ್ಕೆ ಗುರಿಯಾದವರನ್ನೂ ಅಪಾಯಕ್ಕೆ ನೂಕುತ್ತದೆ. 'ಒಬ್ಬ ವ್ಯಕ್ತಿಯ ನಾಶ ಪಡಸಬೇಕೆಂದರೆ ಆತನು ಕೋಪಗೊಳ್ಳುವಂತೆ ಮಾಡಬೇಕು' ಎಂಬ ಮಾತಿದೆ. ಕುಂಬಾರನು ಹಲವು ದಿನಗಳ ಶ್ರಮ ಪಟ್ಟು ತಯಾರಿಸಿದ ಮಡಕೆಯನ್ನು ಒಂದು ದೊಣ್ಣೆಯಿಂದ ನಾಶ ಮಾಡಿದಂತೆ, ಕ್ಷಣಿಕ ಕೋಪವು ಅನಾಹುತ ಉಂಟುಮಾಡುತ್ತದೆ. ಆದರೆ ಅದನ್ನು ಸರಿಪಡಿಸಲಾಗುತ್ತದೆಯೇ? ಕೋಪದಲ್ಲಿ ಕುಯ್ದುಕೊಂಡ ಮೂಗು ಶಾಂತವಾ ನಂತರ ಚಿಂತಿಸಿದರೆ ಮತೆ ಸರರಿಂiಗುತದೆಯೇ? ಆದರಿಂದ 'ತಾಳ್.ಯಿಂದ ಆಲೋಚಿಸಿ. ಕೋಪವನು ಹಿಂದಿಕಿ

# ಆ.25ರಿಂದ 27ರವರೆಗೆ ವೀರಬ್ರಹ್ಮೇಂದ್ರಸ್ವಾಮಿ ವಿಗ್ರಹ ಪ್ರತಿಷ್ಠಾಪನಾ ಮಹೋತ್ಸವ

ಸೂರ್ಯಪ್ರಗತಿನ್ಯೂಸ್.ಕಾಂ

ಪಾವಗಡ: ತಾಲೂಕಿನ ವೈ.ಎನ್.ಹೊಸಕೋಟೆ ಹೋಬಳಿಯ ಜೆ.ಅಚ್ಚಮ್ಮನಹಳ್ಳಿ ಗ್ರಾಮದಲ್ಲಿ ಶ್ರೀಮದ್ವಿ ವಿರಾಟ್ ಪೋತಲೂರಿ ವೀರ ಬ್ರಹ್ಮೇಂದ್ರಸ್ವಾಮಿ ದೇವಸ್ಥಾನ ಟ್ರಸ್ಟ್ ವತಿಯಿಂದ ಆ.25ರಿಂದ 27ರವರೆಗೆ ವಿಗ್ರಹ ಪ್ರತಿಷ್ಠಾಪನಾ ಮಹೋತ್ಸವ ಹಮ್ಮಿಕೊಳ್ಳಲಾಗಿದೆ.

ಶ್ರೀಮಾತಾ ಗೋವಿಂದಾಂಬ ಸಮೇತ ಶ್ರೀ ವೀರಬ್ರಹ್ಮೇಂದ್ರಸ್ವಾಮಿ, ಶ್ರೀ ಮಹಾಗಣಪತಿ, ಶ್ರೀ ಸುಬ್ರಹ್ಮಣ್ಯಸ್ವಾಮಿ ಹಾಗೂ ನವಗ್ರಹ ದೇವತೆಗಳ ವಿಗ್ರಹ ಪ್ರತಿಷ್ಠಾಪನೆ ಅಂಗವಾಗಿ ಮೂರು ದಿನಗಳ ಕಾಲ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ.

ಆ.25ರಂದು ಬೆಳಿಗ್ಗೆ 5.30ಕ್ಕೆ ಸುಪ್ರಭಾತ, ವೇದಪಾರಾಯಣ ಹಾಗೂ ಮಂಗಳವಾದ್ಯಗೋಷ್ಠಿ ನಡೆಯಲಿದೆ. ಬೆಳಿಗ್ಗೆ 9.30ರಿಂದ ಮಹಾಗಣಪತಿ ಪೂಜೆ, ಪುಣ್ಯಾಹವಾಚನ, ದೀಕ್ಷಾಧಾರಣ, ಗೋಪೂಜೆ, ಪಂಚಗವ್ಯ ಪ್ರಾಶನ, ಯಾಗಶಾಲಾ ಪೂಜೆ, ಅಗ್ನಿಪ್ರತಿಷ್ಠೆ, ಲಕ್ಷ್ಮೀಗಣಪತಿ ಹೋಮ



ಹಾಗೂ ಪೂರ್ಣಾಹುತಿ ನಡೆಯಲಿವೆ. ಸಂಜೆ ವಿವಿಧ ದೇವತೆಗಳ ಆವಾಹನೆ ಹಾಗೂ ಜಲಾಧಿವಾಸ ಕಾರ್ಯಕ್ರಮಗಳು ನಡೆಯಲಿವೆ.

ಆ.26ರಂದು ವೇದಪಾರಾಯಣ, ನವಗ್ರಹ ಪೂಜೆ, ಅಭಿಷೇಕ, ವಾಸ್ತು ದೇವತಾ ಪೂಜೆ, ವಿವಿಧ ಹೋಮಗಳು ಹಾಗೂ ಸುಮಂಗಲಿಯರಿಂದ ಕುಂಕುಮಾರ್ಚನೆ ನಡೆಯಲಿವೆ. ಮಧ್ಯಾಹ್ನ 3ಕ್ಕೆ ಮೇಳತಾಳಗಳೊಂದಿಗೆ ವಿಶೇಷ ಗ್ರಾಮೋತ್ಸವ ನಡೆಯಲಿದ್ದು, ಸಂಜೆ ಆದಿವಾಸ, ಮಹಾನೈವೇದ್ಯ ಹಾಗೂ ಇತರ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ.

ಆ.27ರಂದು ಬೆಳಿಗ್ಗೆ ಮಹಾಗಣಪತಿ ಪೂಜೆ, ಪುಣ್ಯಾಹವಾಚನ ಹಾಗೂ ಆಲಯ ವಾಸ್ತು ಪೂಜೆ ನಡೆಯಲಿದೆ. ಬೆಳಿಗ್ಗೆ 11.07ಕ್ಕೆ ಮಂತ್ರಸ್ಥಾಪನೆ ಹಾಗೂ ವಿಗ್ರಹ ಪ್ರತಿಷ್ಠಾಪನೆ ನೆರವೇರಲಿದ್ದು, ಬಳಿಕ ಕಳನ್ಯಾಸ ಪೂಜೆ, ಹೋಮ, ದೃಷ್ಟಿಸ್ಥಾಪನೆ, ನೇತ್ರೋನ್ಮೀಲನ ಸೇರಿದಂತೆ ವಿವಿಧ ಧಾರ್ಮಿಕ ವಿಧಿವಿಧಾನಗಳು ನಡೆಯಲಿವೆ. ಮಹಾಪೂರ್ಣಾಹುತಿ, ಮಹಾನೈವೇದ್ಯ, ಮಂಗಳಾರತಿ ಹಾಗೂ ತೀರ್ಥಪ್ರಸಾದ ವಿತರಣೆ ನಡೆಯಲಿದ್ದು, ಭಕ್ತರಿಗೆ ಅನ್ನಸಂತರ್ಪಣೆಯನ್ನೂ ಏರ್ಪಡಿಸಲಾಗಿದೆ.

ಮಹೋತ್ಸವದಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ದೇವಸ್ಥಾನ ಟ್ರಸ್ಟ್ ಪದಾಧಿಕಾರಿಗಳು ಮನವಿ ಮಾಡಿದ್ದಾರೆ.

# ಈದ್ ಮಿಲಾದ್ ಶಾಂತಿ ಸಭೆ

ಹುಳಿಯಾರು: ಮುಸ್ಲಿಂ ಸಮುದಾಯದ ಪವಿತ್ರ ಹಬ್ಬವಾದ 'ಈದ್ ಮಿಲಾದ್ ಉನ್ ನಬಿ' ಆಚರಣೆಯ ಹಿನ್ನೆಲೆಯಲ್ಲಿ ಹುಳಿಯಾರು ಪೊಲೀಸ್ ಠಾಣೆಯಲ್ಲಿ ಸೌಹಾರ್ದಯುತ ಹಾಗೂ ಶಾಂತಿ ಸಭೆ ಜರುಗಿತು.

ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ತಿಪಟೂರು ಉಪವಿಭಾಗದ ಡಿವೈಎಸ್ಪಿ ಉಮೇಶ್ ಹೆಚ್.ಎಸ್ ಅವರು, ಯಾವುದೇ ಹಬ್ಬಗಳ ಆಚರಣೆ ಸಮಯದಲ್ಲಿ ಕಾನೂನು ಸುವ್ಯವಸ್ಥೆಗೆ ಧಕ್ಕೆ ಬಾರದಂತೆ ನೋಡಿಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹೇಳಿದರು. ಹುಳಿಯಾರಿನಲ್ಲಿ ಸಹೋದರತ್ವ ಮತ್ತು ಬಂಧುತ್ವದ ಪರಂಪರೆ ಇದ್ದು, ಎಲ್ಲರೂ ಒಟ್ಟಾಗಿ ಹಬ್ಬಗಳನ್ನು ಆಚರಿಸಿಕೊಂಡು ಬಂದಿದ್ದಾರೆ. ಮೆರವಣಿಗೆಯಲ್ಲಿ ಯಾವುದೇ ಅ ಹಿತಕರ ಘಟನೆಗಳು ನ ಡೆಯದಂತೆ ಹಾಗೂ ಂ ಯುವಕರು ಯಾವುದೇ ರೀತಿಯ ಗಲಾಟೆ, ಅಶಾಂತಿ ಸೃಷ್ಟಿಸದಂತೆ ಹಿರಿಯರು ಮಾರ್ಗದರ್ಶನ ನೀಡಬೇಕು ಎ ಂದು ಕಿವಿಮಾತು ಹೇಳಿದರು.



ಮೆರವಣಿಗೆ ಮಾರ್ಗ: ಪೊಲೀಸರು ಅನುಮತಿಸಿದ ನಿಗದಿತ ಮಾರ್ಗದಲ್ಲೇ ಮೆರವಣಿಗೆ ಸಾಗಬೇಕು, ಯಾವುದೇ ಕಾರಣಕ್ಕೂ ಮಾರ್ಗ ಬದಲಿಸುವಂತಿಲ್ಲ.

ಅನುಮತಿ ಕಡ್ಡಾಯ: ಧ್ವನಿವರ್ಧಕ ಬಳಕೆಗೆ ಪೊಲೀಸ್ ಇಲಾಖೆಯಿಂದ, ವಿದ್ಯುತ್ ಸಂಪರ್ಕಕ್ಕೆ ಬೆಸ್ಕಾಂನಿಂದ ಹಾಗೂ ಫ್ಲೆಕ್ಸ್, ಬ್ಯಾನರ್ ಮತ್ತು ಬಂಟಿಂಗ್ಸ್ ಅಳವಡಿಸಲು ಪಟ್ಟಣ ಪಂಚಾಯಿತಿಯಿಂದ ಕಡ್ಡಾಯವಾಗಿ ಪೂರ್ವಾನುಮತಿ ಪಡೆಯಬೇಕು.

ಸಭೆಯಲ್ಲಿ ಭಾಗವಹಿಸಿದ್ದ ಜಾಮಿಯಾ ಮಸೀದಿ, ನೂರಾನಿ ಮಸೀದಿ ಮತ್ತು ಬಿ ಲಾಲ್ ಮಸೀದಿಯ ಮೌಲ್ವಿಗಳು ಹಾಗೂ ಮುಸ್ಲಿಂ ಸಮುದಾಯದ ನಾಯಕರು, ಇಲಾಖೆಯ ಎಲ್ಲಾ ಸೂಚನೆಗಳನ್ನು ಶಿಸ್ತಿನಿಂದ ಪಾಲಿಸಿ ಹಬ್ಬವನ್ನು ಸೌಹಾರ್ದಯುತವಾಗಿ ಆಚರಿಸುವುದಾಗಿ ಭರವಸೆ ನೀಡಿದರು.

SP NEWS ಸಣ್ ಸುದ್ದಿ

ಸೊಸೈಟಿಗಳಲ್ಲಿ ರೈತರಿಗೆ ದ್ವಿಗುಣ ಸಾಲ ಮಂಜೂರು ಮಾಡಿಸಿ:

# ಮಾಜಿ ಸಚಿವ ಕೆ.ಎನ್. ರಾಜಣ್ಣ ಅವರಿಗೆ ಮನವಿ



ಪಾವಗಡ:ತಾಲೂಕಿನಲ್ಲಿ ಮಳೆ-ಬೆಳೆ ಇಲ್ಲದೆ ರೈತರು ಸಂಕಷ್ಟದಲ್ಲಿದ್ದು, ಈಗಾಗಲೇ ಸೊಸೈಟಿಗಳಲ್ಲಿ ರೈತರಿಗೆ ಸಾಲ ಮಂಜೂರು ಮಾಡಲಾಗಿದೆ. ಆದರೆ ಈಗಿರುವ ಸಾಲದ ಮೊತ್ತ ಸಾಕಾಗುತ್ತಿಲ್ಲ. ರೈತರ ಹಿತದೃಷ್ಟಿಯಿಂದ ಈಗ ನೀಡುತ್ತಿರುವ ಸಾಲಕ್ಕಿಂತ ಎರಡು ಪಟ್ಟು ಹೆಚ್ಚಿನ ಸಾಲವನ್ನು ಮಂಜೂರು ಮಾಡಿಸಿಕೊಡಬೇಕು ಎಂದು ರೈತರು ಮಧುಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ಮಾಜಿ ಸಹಕಾರ ಸಂಘಗಳ ಸಚಿವ ಕೆ.ಎನ್. ರಾಜಣ್ಣ ಅವರಿಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ತಾಲೂಕು ರೈತ ಸಂಘದ ಅಧ್ಯಕ್ಷ ನರಸಿಂಹರೆಡ್ಡಿ, ತುಮುಲ್ ಮಾಜಿ ನಿರ್ದೇಶಕ ಚಂದ್ರಶೇಖರ್ ರೆಡ್ಡಿ, ಮಧುಗಿರಿ ಎಸಿ ಗುಟೂರು ಶಿವಪ್ಪ, ಓಬಳಾಪುರ ತಿಪ್ಪೇಸ್ವಾಮಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ತಿರುಪತಿ ತಿರುಮಲ ಪಾದಯಾತ್ರೆ

ಸೂರ್ಯಪ್ರಗತಿನ್ಯೂಸ್.ಕಾಂ

ಕುಣಿಗಲ್; ಲೋಕ ಕಲ್ಯಾಣಾರ್ಥವಾಗಿ ಶ್ರೀನಿವಾಸ ಕಲ್ಯಾಣೋತ್ಸವವನ್ನು ಏರ್ಪಡಿಸಲಾಗಿದೆ ಎಂದು ತಿರುಪತಿ ತಿರುಮಲ ಪಾದಯಾತ್ರೆ ಸಮಿತಿಯ ಅಧ್ಯಕ್ಷರಾದ ಕೆ ಎಸ್ ಬಲರಾಮ್ ತಿಳಿಸಿದರು. ಪಟ್ಟಣದಲ್ಲಿ ಅವರು



ಸುದ್ದಿಗಾರರೊಂದಿಗೆ ಮಾತ ನಾಡುತ್ತಾ ದಿನಾಂಕ 23 ರ ಭಾನುವಾರ ದಂದು ದಿವ್ಯ ಸಮುದಾಯ ಭವನದಲ್ಲಿ ಲೋಕ ಕಲ್ಯಾಣಾರ್ಥವಾಗಿ ದೇಶದಲ್ಲಿ ಮಳೆ ಸಮೃದ್ಧಿಯಾಗಿ ಬೆಳೆಯಾಗಲೆಂದು ಶ್ರೀ ತಿರುಪತಿ ತಿರುಮಲ ಪಾದಯಾತ್ರೆ ಸಮಿತಿಯು ಎರಡನೇ ವರ್ಷದ ಶ್ರೀ ಶ್ರೀನಿವಾಸ ಕಲ್ಯಾಣೋತ್ಸವವನ್ನು ಹಮ್ಮಿಕೊಂಡಿದ್ದು ಈ ಕಲ್ಯಾಣೋತ್ಸವ ಕಾರ್ಯಕ್ರಮವು ಜರುಗುತ್ತಿದ್ದು ಕಳೆದ ಹತ್ತು ವರ್ಷಗಳಿಂದ ಪವಿತ್ರ ಧಾರ್ಮಿಕ ಸೇವೆಯನ್ನು ಸಮಿತಿಯು ಈ ವರ್ಷವೂ ಸಹ ಶ್ರೀನಿವಾಸ ಕಲ್ಯಾಣೋತ್ಸವವನ್ನು ಆಯೋಜಿಸಲಾಗಿದೆ ಈ ಕಾರ್ಯಕ್ರಮದಲ್ಲಿ ಐದು ನೂರುಮಂದಿ ದಾಸಪ್ಪ ನವರು, 500 ಮಂದಿ ವೈಷ್ಣವ ಅರ್ಚಕರು ಭಾಗವಹಿಸುತ್ತಿದ್ದು ಈ ಕಾರ್ಯಕ್ರಮದಲ್ಲಿ ಸುಮಾರು 15 ಸಾವಿರಕ್ಕೂ ಹೆಚ್ಚು ಭಕ್ತಾದಿಗಳು ಭಾಗವಹಿಸುವ ನಿರೀಕ್ಷೆ ಇದೆ ಭಕ್ತರಿಗೆ ತೀರ್ಥ ಪ್ರಸಾದ ಲಾಡು ವಿತರಣೆ ಹಾಗೂ ಅಗತ್ಯ ವ್ಯವಸ್ಥೆಯನ್ನು ಮಾಡಲಾಗಿದೆ ಕಾರ್ಯಕ್ರಮದ ಬಳಿಕ ಉತ್ಸವ ಮೂರ್ತಿಗಳ ಮೆರವಣಿಗೆಯನ್ನು ಪಟ್ಟಣ ದ ಪ್ರಮುಖ ರಾಜಬೀದಿಗಳಲ್ಲಿ ಅದ್ದೂರಿಯಾಗಿ ನಡೆಸಲು ಉದ್ದೇಶಲಾಗಿದೆ ಎಂದು ತಿಳಿಸಿದರು.

# "ಯುವ ಸಂವಾದ ಸಾಧನೆ, ಸವಾಲು, ನಾಯಕತ್ವ" ನೇರ ಸಂವಾದ

ತುಮಕೂರು : ವಿದ್ಯಾರ್ಥಿಗಳಲ್ಲಿ ಸಾಧನೆಯ ಕನಸು, ಸವಾಲುಗಳನ್ನು ಎದುರಿಸುವ ಧೈರ್ಯ ಹಾಗೂ ನಾಯಕತ್ವದ ಗುಣಗಳನ್ನು ಬೆಳೆಸುವ ಉದ್ದೇಶದಿಂದ ಕರ್ನಾಟಕ ಕಾರ್ಯನಿರತ ಪತ್ರಕರ್ತರಸಂಘದ ತುಮಕೂರು ಜಿಲ್ಲಾ ಘಟಕ ತುಮಕೂರು ವಿಶ್ವವಿದ್ಯಾಲಯ, ವಿವಿ ಕಲಾ ಕಾಲೇಜು, ವಿವಿ

ಮಹಿಳಾ ಅಧ್ಯಯನ ಕೇಂದ್ರ ,ಪ್ರೆಸ್ ಕ್ಲಬ್ ಸಹಯೋಗದಲ್ಲಿ "ಯುವ ಸಂವಾದ ಸಾಧನೆ,ಸವಾಲು, ನಾಯಕತ್ವ" ನೇರ ಸಂವಾದ ಹಮ್ಮಿಕೊಂಡಿದೆ.ಆ. 24ರಂದು ಬೆಳಗ್ಗೆ 11 ಗಂಟೆಗೆ ತುಮಕೂರು ವಿಶ್ವವಿದ್ಯಾಲಯದ ಸರ್ ಎಂ.ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ಕಾರ್ಯಕ್ರಮ ನಡೆಯಲಿದೆ.ತುಮಕೂರು ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ಅವರು ವಿದ್ಯಾರ್ಥಿಗಳೊಂದಿಗೆ ನೇರವಾಗಿಸಂವಾದ ನಡೆಸಲಿದ್ದು, ತಮ್ಮ ಅನುಭವ, ವೃತ್ತಿ ಪಯಣ ಹಾಗೂ ಸಾಧನೆಯ ಹಾದಿಯ ಕುರಿತುಹಂಚಿಕೊಳ್ಳುವ ಮೂಲಕ ವಿದ್ಯಾರ್ಥಿಗಳಿಗೆ ಸ್ಫೂರ್ತಿ ತುಂಬಲಿದ್ದಾರೆ.ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ನಾಯಕತ್ವದ ಗುಣ ಹಾಗೂ ಸವಾಲುಗಳನ್ನು ಧೈರ್ಯದಿಂದಎದುರಿಸುವ ಮನೋಭಾವ ಬೆಳೆಸುವ ನಿಟ್ಟಿನಲ್ಲಿ ಈ ಕಾರ್ಯಕ್ರಮ ಮಹತ್ವದ್ದಾಗಿದ್ದು, ಈ ಸಂವಾದದಲ್ಲಿ 'ಯುವಶಕ್ತಿ' ಪಾಲ್ಗೊಳ್ಳಬೇಕೆಂದು ಸಂಘದ ಜಿಲ್ಲಾಧ್ಯಕ್ಷ ಎಲ್.ಯೋಗೇಶ್ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

# ಅಂಬೇಡ್ಕರ್ ಅವರ ವಿಚಾರಧಾರೆಗಳು ಎಲ್ಲ ವರ್ಗದ ಜನರಿಗೂ ಅನ್ವಯ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಸಂವಿಧಾನ ಶಿಲ್ಪಿ ಡಾ: ಬಿ.ಆರ್. ಅಂಬೇಡ್ಕರ್ ಅವರ ವಿಚಾರಧಾರೆಗಳು ಎಲ್ಲ ವರ್ಗದ ಜನರಿಗೂ ಅನ್ವಯವಾಗುತ್ತದೆ ಎಂದು ಡಾ: ಮೂರ್ತಿ ತಿಮ್ಮನಹಳ್ಳಿ ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಗುಬ್ಬಿ ತಾಲ್ಲೂಕು ಘಟಕದ ಕನ್ನಡ ಸಾಹಿತ್ಯ ಪರಿಷತ್ ಹಾಗೂ ಗುಬ್ಬಿ ಪಟ್ಟಣದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಸಂಯುಕ್ತಾಶ್ರಯದಲ್ಲಿ ಬುಧವಾರ ಗುಬ್ಬಿ ಪಟ್ಟಣದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಆಯೋಜಿಸಿದ್ದ ಭಾರತರತ್ನ ಡಾ: ಬಿ.ಆರ್. ಅಂಬೇಡ್ಕರ್ ಓದು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು ಬಾಬಾ ಸಾಹೇಬ ಅಂಬೇಡ್ಕರ್ ಅವರ ಆಲೋಚನೆ ಮತ್ತು ಹೋರಾಟಗಳನ್ನು ಯಾವುದೇ ಒಂದು ಜಾತಿ, ಧರ್ಮ, ಭಾಷೆ ಹಾಗೂ ಪ್ರದೇಶಗಳಿಗೆ ಸೀಮಿತಗೊಳಿಸುವ ಮನೋಭಾವದಿಂದ ನಾವೆಲ್ಲ ಹೊರಬರಬೇಕು ಎಂದು ಹೇಳಿದರು.



ಬಾಬಾಸಾಹೇಬ ಅಂಬೇಡ್ಕರ್ ಅವರ ವಿಚಾರಧಾರೆಗಳು ಕೇವಲ ದಲಿತರು ಹಾಗೂ ಅಸ್ಪೃಶ್ಯರಿಗೆ ಸೀಮಿತವಾಗಿಲ್ಲ. ಭಾರತದ ಎಲ್ಲ ವರ್ಗದ ಮಹಿಳೆಯರು ಸೇರಿದಂತೆ ಎಲ್ಲ ಜಾತಿ ಮತ್ತು ಧರ್ಮದ ಜನರ ಹಕ್ಕುಗಳಿಗೆ ಅನ್ವಯವಾಗುವ ಸಂವಿಧಾನವನ್ನು ರಚಿಸುವ ಮೂಲಕ ಅವರು ಭಾರತದ ಭಾಗ್ಯವಿಧಾತರಾಗಿದ್ದಾರೆ ಎಂದು ತಿಳಿಸಿದರು.

ಪ್ರಧಾನ ಉಪನ್ಯಾಸ ನೀಡಿದ ಡಾ: ಕೊಟ್ಟಶಂಕರ್ ಅವರು ಅಂಬೇಡ್ಕರ್ ಅವರ ವಿಚಾರಧಾರೆಗಳ ಪ್ರಸ್ತುತತೆ, ಸಂವಿಧಾನ ರಚನೆಯಲ್ಲಿ ಅವರು ವಹಿಸಿದ ಪ್ರಮುಖ ಪಾತ್ರ, ಸಂವಿಧಾನ ರಚನಾ ಸಮಿತಿಯ ಮಹಿಳಾ ಸದಸ್ಯರ ಕೊಡುಗೆ ಹಾಗೂ ಅಂಬೇಡ್ಕರ್ ಅವರು ಮಂಡಿಸಿದ್ದ ಹಿಂದೂ ಕೋಡ್ ಬಿಲ್‌ಗೆ ಎದುರಾದ ಹಿನ್ನಡೆ ಮತ್ತು ಅದರ ಹಿನ್ನೆಲೆಯಲ್ಲಿ ಅವರು ನೀಡಿದ ರಾಜೀನಾಮೆ ಕುರಿತು ವಿವರಿಸಿದರಲ್ಲದೆ ಮೀಸಲಾತಿ ಕುರಿತು ಸಮಾಜದಲ್ಲಿರುವ ತಪ್ಪು ಕಲ್ಪನೆಗಳನ್ನು ಹೋಗಲಾಡಿಸುವ ಅಗತ್ಯವಿದೆ. ಮೀಸಲಾತಿಯ ಹಂಚಿಕೆ ಮತ್ತು ಅದರ ಸಂವಿಧಾನಾತ್ಮಕ ಹಿನ್ನೆಲೆಯನ್ನು ವಿದ್ಯಾರ್ಥಿಗಳು ಸ್ಪಷ್ಟವಾಗಿ ತಿಳಿದುಕೊಳ್ಳಬೇಕು. ವಾಸ್ತವಾಂಶಗಳನ್ನು ಮರೆಮಾಚುವ ಮೀಸಲಾತಿ ವಿರೋಧಿ ಅಭಿಪ್ರಾಯಗಳಿಗೆ ಸೂಕ್ತ ಉತ್ತರ ನೀಡುವಷ್ಟು ಜ್ಞಾನವನ್ನು ವಿದ್ಯಾರ್ಥಿಗಳು ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಈಶ್ವರ ಕು. ಮಿರ್ಜಿ ಮಾತನಾಡಿ, ಯುವಕರು ಹಾಗೂ ವಿದ್ಯಾರ್ಥಿಗಳಲ್ಲಿ ಸಂವಿಧಾನಾತ್ಮಕ ಮೀಸಲಾತಿ ಕುರಿತು ಸ್ಪಷ್ಟ ಅರಿವು ಮೂಡಿಸುವ ಅಗತ್ಯವಿದೆ. ಇದರಿಂದ ಮೀಸಲಾತಿ ಕುರಿತು ಇರುವ ಪೂರ್ವಾಗ್ರಹಗಳು ದೂರವಾಗಲಿವೆ. ಸಾಮಾಜಿಕ ಮಾಧ್ಯಮಗಳಲ್ಲಿ ಮೀಸಲಾತಿ ಕುರಿತು ಹರಡುತ್ತಿರುವ ತಪ್ಪು ಕಲ್ಪನೆಗಳು ಸಮಾಜದಲ್ಲಿ ಗೊಂದಲ ಮೂಡಿಸುತ್ತಿದ್ದು, ಪ್ರತಿಯೊಂದು ಶಾಲಾ-ಕಾಲೇಜುಗಳಲ್ಲಿಯೂ ಅಂಬೇಡ್ಕರ್ ಓದು, ಸಂವಿಧಾನ ಮತ್ತು ಮೀಸಲಾತಿ ಕುರಿತ ಕಾರ್ಯಕ್ರಮಗಳು ನಡೆಯಬೇಕೆಂದು ತಿಳಿಸಿದರು.

ವಿಶೇಷವಾಗಿ ಕಾಲೇಜಿನ ವಿದ್ಯಾರ್ಥಿನಿಯರು ಸಂವಿಧಾನದ ಪೀಠಿಕೆಯನ್ನು ಓದುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಲಾಯಿತು.

ಕನ್ನಡ ಸಾಹಿತ್ಯ ಪರಿಷತ್ ಗುಬ್ಬಿ ಶಾಖೆಯ ಅಧ್ಯಕ್ಷ ಯತೀಶ್ ಹೆಚ್.ಸಿ. ಸ್ವಾಗತಿಸಿದರು. ಕಾಲೇಜಿನ ಪ್ರಾಚಾರ್ಯ ಮಂಜುನಾಥ ಎಂ.ಕೆ. ಅಧ್ಯಕ್ಷತೆವಹಿಸಿದ್ದರು. ಉಪನ್ಯಾಸಕಿ ಅಂಬಿಕಾ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಉಪನ್ಯಾಸಕ ದೊಡ್ಡಯ್ಯ ಹೆಚ್.ಎನ್. ಕಾರ್ಯಕ್ರಮ ನಿರೂಪಿಸಿದರು. ಕಾಲೇಜಿನ ಉಪನ್ಯಾಸಕ ವರ್ಗದವರು ಉಪಸ್ಥಿತರಿದ್ದರು.

# ಮನೆಗಳಿಗಾಗಿ ಹೆಚ್ಚು ಸ್ಮಾರ್ಟ್, ಸುಲಭ ಮತ್ತು ಆರೋಗ್ಯಕರ ತಂತ್ರಜ್ಞಾನ ಒದಗಿಸಲು ಈ ಸಹಭಾಗಿತ್ವ

ಸೂರ್ಯಪ್ರಗತಿನ್ಯೂಸ್.ಕಾಂ

ಬೆಂಗಳೂರು, ಬಾಲಿವುಡ್‌ನ ಖ್ಯಾತ ನಟ ಅಕ್ಷಯ್ ಕುಮಾರ್ ಅವರನ್ನು Acer ನ ಬ್ರಾಂಡ್ ಅಂಬಾಸಿಡರ್ ಆಗಿ ಆಯ್ಕೆ ಮಾಡಲಾಗಿದೆ. ಅಕ್ಷಯ್ ಕುಮಾರ್ ಅವರನ್ನು ಸ್ವಾಗತಿಸಲು Acer ಸಜ್ಜಾಗಿದ್ದು, ಜಾಗತಿಕ ತಂತ್ರಜ್ಞಾನ ಸಂಸ್ಥೆಯಾದ Acer ತನ್ನ 50 ವರ್ಷಗಳ ನವೀನತೆಯ ಪಯಣ ಮತ್ತು ಭಾರತದಲ್ಲಿ 27 ವರ್ಷಗಳ ಸಾಧನೆಯನ್ನು ಆಚರಿಸುತ್ತಿರುವ ಸಂದರ್ಭದಲ್ಲಿ ಈ ಸಹಭಾಗಿತ್ವ ಆರಂಭವಾಗುತ್ತಿದೆ. ವೈಯಕ್ತಿಕ ಕಂಪ್ಯೂಟಿಂಗ್ ಕ್ಷೇತ್ರದಿಂದ ಆಧುನಿಕ ಮನೆಗಾಗಿ ವಿಶಾಲವಾದ ಉತ್ಪನ್ನಗಳ ಪರಿಸರ ವ್ಯವಸ್ಥೆಯತ್ತ ತನ್ನ ವ್ಯಾಪ್ತಿಯನ್ನು ವಿಸ್ತರಿಸುತ್ತಿರುವತ್ತ Acer ದಾಪುಗಾಲು ಇಟ್ಟಿದೆ. ಈ ನಿಟ್ಟಿನಲ್ಲಿ ಸಂಸ್ಥೆಯು ಅಕ್ಷಯ್ ಕುಮಾರ್ ಅವರ ಚುರುಕುತನ ಮತ್ತು ಕಾರ್ಯಕ್ಷಮತೆ ಆಧಾರಿತ ವ್ಯಕ್ತಿತ್ವವನ್ನು ತನ್ನ ದೀರ್ಘಕಾಲೀನ ತಂತ್ರಜ್ಞಾನ ಹಾಗೂ ನವೀನತೆಯ ಪರಂಪರೆಯೊಂದಿಗೆ ಜೋಡಿಸುತ್ತಿದೆ.

Acer ಜೊತೆಗಿನ ತಮ್ಮ ಸಹಭಾಗಿತ್ವದ ಕುರಿತು ಮಾತನಾಡಿದ ಅಕ್ಷಯ್ ಕುಮಾರ್ ಅವರು, "ನನ್ನ ಜೀವನ ಯಾವಾಗಲೂ ಕ್ರಿಯಾಶೀಲವಾಗಿರುತ್ತದೆ. ಕೆಲಸ, ಪ್ರಯಾಣ, ಫಿಟ್‌ನೆಸ್ ಮತ್ತು ಕುಟುಂಬ:- ಹೀಗೆ ಎಲ್ಲವೂ ಇರುತ್ತವೆ. ಮನೆಗೆ ಬಂದಾಗ ಎಲ್ಲವೂ ಸರಳವಾಗಿರಬೇಕು ಎಂಬುದನ್ನು ನಾನು ಬಯಸುತ್ತೇನೆ. ತಂತ್ರಜ್ಞಾನವು ಜೀವನವನ್ನು ಸುಲಭಗೊಳಿಸಬೇಕು, ನಮ್ಮ ಕೆಲಸಗಳ ಪಟ್ಟಿಯನ್ನು ಮತ್ತಷ್ಟು ಹೆಚ್ಚಿಸಬಾರದು. ಜನರು ಹೇಗೆ ಬದುಕುತ್ತಿದ್ದಾರೆ ಎಂಬುದಕ್ಕೆ ಅನುಗುಣವಾಗಿ ಒಬಿಜಿಡಿ ಕೂಡ ತನ್ನನ್ನು ತಾನು ರೂಪಿಸಿಕೊಂಡಿರುವುದು




ನನಗೆ ಇಷ್ಟವಾಗಿದೆ. House of House of Acer ಮೂಲಕ ನಾವು ಕೆಲಸ ಮಾಡುವುದರಿಂದ ಹಿಡಿದು ಮನರಂಜನೆ ಪಡೆಯುವವರೆಗೆ ಮತ್ತು ಮನೆಯಲ್ಲಿ ಬದುಕುವ ರೀತಿಯವರೆಗೆ, ದೈನಂದಿನ ಜೀವನದ ಸಹಜ ಭಾಗವಾಗಬಲ್ಲ ತಂತ್ರಜ್ಞಾನವನ್ನು ಒಂದೇ ಕಡೆ ಕಾಣಬಹುದು. ಇದೇ ಕಾರಣಕ್ಕೆ ಈ ಸಹಭಾಗಿತ್ವ ನನಗೆ ತುಂಬಾ ವಿಶೇಷವಾಗಿದೆ" ಎಂದರು.

House of Acer ನ ಬ್ರಾಂಡ್ ಅಂಬಾಸಿಡರ್ ವಿಸ್ತರಿಸುತ್ತಿರುವ ಉತ್ಪನ್ನ ಪರಿಸರ ವ್ಯವಸ್ಥೆಯನ್ನು ಪ್ರದರ್ಶಿಸುತ್ತದೆ. ಲ್ಯಾಪ್‌ಟಾಪ್‌ಗಳು ಮತ್ತು ಕಂಪ್ಯೂಟಿಂಗ್ ಉತ್ಪನ್ನಗಳ ಜೊತೆಗೆ ಟೆಲಿವಿಷನ್‌ಗಳು, ಏರ್ ಕಂಡೀಷನರ್‌ಗಳು, ವಾಷಿಂಗ್ ಮೆಷಿನ್‌ಗಳು ಹಾಗೂ ಇತರ ಗೃಹೋಪಯೋಗಿ ಪರಿಹಾರಗಳನ್ನು ಇದು ಒಂದೇ ವೇದಿಕೆಯಲ್ಲಿ ಒಗ್ಗೂಡಿಸುತ್ತದೆ. ತಂತ್ರಜ್ಞಾನವನ್ನು ಪ್ರತ್ಯೇಕ ಉತ್ಪನ್ನಗಳಾಗಿ ನೋಡುವ ಬದಲು, ಅವುಗಳನ್ನು ಪರಸ್ಪರ ಸಂಪರ್ಕ ಹೊಂದಿರುವ ಮನೆಯ ಸಮಗ್ರ ಅನುಭವದ ಭಾಗವಾಗಿ ಪರಿಗಣಿಸುವುದು ಇದರ ವಿಶೇಷತೆಯಾಗಿದೆ.

ಈ ಸಹಭಾಗಿತ್ವವು Acerಗೆ ಮಹತ್ವದ ಮೈಲಿಗಲ್ಲಿನ ಸಮಯದಲ್ಲಿಯೇ ಆರಂಭವಾಗುತ್ತಿದೆ. ಜಾಗತಿಕವಾಗಿ 50 ವರ್ಷಗಳ ಪರಂಪರೆ ಮತ್ತು ಭಾರತದಲ್ಲಿ 27 ವರ್ಷಗಳ ಪಯಣವನ್ನು ಪೂರೈಸಿರುವ ಒಬಿಜಿಡಿ, ಬದಲಾಗುತ್ತಿರುವ ಗ್ರಾಹಕರ ಅಗತ್ಯಗಳು ಮತ್ತು ತಂತ್ರಜ್ಞಾನದ ಬೆಳವಣಿಗೆಯೊಂದಿಗೆ ನಿರಂತರವಾಗಿ ರೂಪಾಂತರಗೊಂಡಿದೆ.

ಈ ಸಹಭಾಗಿತ್ವದ ಬಗ್ಗೆ ಮಾತನಾಡಿದ ಏಸರ್ ಇಂಡಿಯಾ ಗ್ರೂಪ್‌ನ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕರಾದ ಹರೀಶ್ ಕೊಹ್ಲಿ ಅವರು, 'ಜಾಗತಿಕವಾಗಿ 50 ವರ್ಷಗಳಿಂದ ಮತ್ತು ಭಾರತದಲ್ಲಿ 27 ವರ್ಷಗಳಿಂದ, ಏಸರ್ ಗ್ರಾಹಕರ ಬದಲಾಗುತ್ತಿರುವ ಅಗತ್ಯಗಳಿಗೆ ಅನುಗುಣವಾಗಿ ನಿರಂತರವಾಗಿ ವಿಕಸನಗೊಳ್ಳುತ್ತ ಬಂದಿದೆ. ಇಂದು ತಂತ್ರಜ್ಞಾನವು ಕೇವಲ ಮೇಜಿನ ಮೇಲಷ್ಟೇ ಸೀಮಿತವಾಗಿಲ್ಲ; ನಾವು ಕೆಲಸ ಮಾಡುವ, ವಿಶ್ರಾಂತಿ ಪಡೆಯುವ, ಮನರಂಜನೆ ಅನುಭವಿಸುವ ಮತ್ತು ಜೀವನ ನಡೆಸುವ ರೀತಿಯ ಅವಿಭಾಜ್ಯ ಅಂಗವಾಗಿದೆ. 'ದಿ ಹೌಸ್ ಆಫ್ ಏಸರ್' ಈ ವಿಕಾಸವನ್ನು ಒಂದೆಡೆ ಸೇರಿಸಿ, ತಂತ್ರಜ್ಞಾನವು ದೈನಂದಿನ ಜೀವನವನ್ನು ಹೆಚ್ಚು ಸ್ಮಾರ್ಟ್, ಸುಲಭ ಮತ್ತು ಆರೋಗ್ಯಕರವಾಗಿಸುವ ಮನೆಯೊಂದನ್ನು ರೂಪಿಸುತ್ತದೆ. ಅಕ್ಷಯ್ ಕುಮಾರ್ ಅವರಲ್ಲಿ ಕಾರ್ಯಕ್ಷಮತೆ, ಶಿಸ್ತು, ವಿಶ್ವಾಸಾರ್ಹತೆ ಮತ್ತು ನಿರಂತರವಾಗಿ ವಿಕಸನಗೊಳ್ಳುವ ಗುಣಗಳಿವೆ. ಆದ್ದರಿಂದ ಏಸರ್‌ನ ಈ ಹೊಸ ಅಧ್ಯಾಯಕ್ಕೆ ಅವರು ಸಹಜವಾದ ಪಾಲುದಾರರಾಗಿದ್ದಾರೆ' ಎಂದು ಬಣ್ಣಿಸಿದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿ ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಪಾವಗಡ ಶನಿ ಮಹಾತ್ಮ ದೇವಸ್ಥಾನದ ಮುಂದೆ ಭಕ್ತರಿಗೆ ಹಣದ ದೋಖಾ ವಿಡಿಯೋ ಮೂಲಕ ಮೋಸ ಬಯಲಿಗೆಳೆದ ಯುವಕರು!

ಸೂರ್ಯಪ್ರಗತಿನ್ಯೂಸ್.ಕಾಂ

ಪಾವಗಡ: ತುಮಕೂರು ಜಿಲ್ಲೆಯ ಪ್ರಸಿದ್ಧ ಧಾರ್ಮಿಕ ಕ್ಷೇತ್ರ ಪಾವಗಡದ ಶನಿ ಮಹಾತ್ಮ ದೇವಾಲಯದಲ್ಲಿ ಮುಗ್ಧ ಭಕ್ತರನ್ನು ಗುರಿಯಾಗಿಸಿಕೊಂಡು ನಡೆಯುತ್ತಿರುವ ಹಣದ ಸುಲಿಗೆ ಅಕ್ರಮವನ್ನು ಯುವಕರ ತಂಡವೊಂದು ವಿಡಿಯೋ ಮೂಲಕ ಬಯಲಿಗೆಳೆದಿದೆ. ಘಟನೆಯ ವಿಡಿಯೋ ಸದ್ಯ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿದ್ದು, ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.



ಘಟನೆಯ ವಿವರ:

ದೇವಸ್ಥಾನಕ್ಕೆ ಮೊದಲ ಬಾರಿಗೆ ಭೇಟಿ ನೀಡಿದ್ದ ಯುವಕರನ್ನು ಸ್ಥಳೀಯ ವ್ಯಕ್ತಿಯೊಬ್ಬ ಗೈಡ್ ರೀತಿಯಲ್ಲಿ ಆತ್ಮೀಯವಾಗಿ ಮಾತನಾಡಿಸಿ, ದೇವಸ್ಥಾನದ ಮುಂಭಾಗದಲ್ಲಿರುವ ಒಂದು ನಿರ್ದಿಷ್ಟ ಪೂಜಾ ಸಾಮಗ್ರಿಗಳ ಅಂಗಡಿಗೆ ಕರೆದೊಯ್ದಿದ್ದಾನೆ.

ಅಂಗಡಿಯಲ್ಲಿದ್ದ ಮಹಿಳೆ "ನಿಮ್ಮ ಜಾತಕದಲ್ಲಿ ಶನಿ ದೋಷ ಇದೆ, ರಾಶಿಗೆ ತಕ್ಕಂತೆ ಪೂಜೆ ಮಾಡಬೇಕು" ಎಂದು ಹೇಳಿ ಎಣ್ಣೆಯ ಪೊಟ್ಟಣ, ಎಳ್ಳು, ಹೂವು-ಪತ್ರೆಗಳನ್ನು ಪ್ರತಿಯೊಬ್ಬರ ಕೈಗೂ ಬಲವಂತವಾಗಿ ನೀಡಿದ್ದಾರೆ.

ಪೂಜೆ ಮುಗಿಸಿ ಹಣ ನೀಡಲು ಹೋದಾಗ ಅಚ್ಚರಿ ಕಾದಿತ್ತು. ಕೇವಲ ಸಣ್ಣ ಪ್ರಮಾಣದ ಎಣ್ಣೆ ಮತ್ತು ಎಳ್ಳಿನ ಎರಡು ಸೆಟ್‌ಗೆ ಬರೋಬ್ಬರಿ 400 (ಒಂದು ಸೆಟ್‌ಗೆ 200) ನೀಡುವಂತೆ ಮಹಿಳೆ ಒತ್ತಾಯಿಸಿದ್ದಾಳೆ. ಯುವಕರು 300 ನೀಡಲು ಮುಂದಾದರೂ ಒಪ್ಪದೆ ಪೂರ್ಣ 400 ಕೊಡುವಂತೆ ಪಟ್ಟು ಹಿಡಿದಿದ್ದಾಳೆ ಎಂದು ವಿಡಿಯೋದಲ್ಲಿ ಸ್ಪಷ್ಟವಾಗಿ ಕಾಣಿಸುತ್ತಿದೆ.

ಸಾರ್ವಜನಿಕರ ಆಗ್ರಹ:

"ಧರ್ಮ ಮತ್ತು ದೇವರ ಹೆಸರಿನಲ್ಲಿ ಬರುವ ಮುಗ್ಧ ಭಕ್ತರ ನಂಬಿಕೆಯನ್ನೇ ಬಂಡವಾಳ ಮಾಡಿಕೊಂಡು ಇಂತಹ ದುಬಾರಿ ಸುಲಿಗೆ ನಡೆಯುತ್ತಿರುವುದು ಖಂಡನೀಯ. ಹೊರ ಜಿಲ್ಲೆ, ಹೊರ ರಾಜ್ಯದಿಂದ ಬರುವ ಭಕ್ತರಿಗೆ ಇದು ಕೆಟ್ಟ ಅನುಭವ ನೀಡುತ್ತದೆ" ಎಂದು ಯುವಕರು ವಿಡಿಯೋದಲ್ಲಿ ಹೇಳಿದ್ದಾರೆ. ದೇವಾಲಯದ ಆಡಳಿತ ಮಂಡಳಿ, ಮತ್ತು ಪುರಸಭೆ ಅಧಿಕಾರಿಗಳು ಮತ್ತು ಪೊಲೀಸ್ ಇಲಾಖೆ ತಕ್ಷಣವೇ ಮಧ್ಯಪ್ರವೇಶಿಸಿ: ದೇವಸ್ಥಾನದ ಸುತ್ತಮುತ್ತಲಿನ ಅಂಗಡಿಗಳಲ್ಲಿ ಪೂಜಾ ಸಾಮಗ್ರಿಗಳಿಗೆ ನಿಗದಿತ ದರ ಪಟ್ಟಿ ಹಾಕಬೇಕು. ಗೈಡ್ ಹೆಸರಿನಲ್ಲಿ ಭಕ್ತರನ್ನು ದಾರಿ ತಪ್ಪಿಸುವ ಜಾಲಕ್ಕೆ ಕಡಿವಾಣ ಹಾಕಬೇಕು. ಭಕ್ತರಿಗೆ ಜಾಗೃತಿ ಫಲಕಗಳನ್ನು ಅಳವಡಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ಅಂಬೇಡ್ಕರ್ ಭವನಕ್ಕೆ ಶಂಕುಸ್ಥಾಪನೆ



ರಾಮನಗರ, : ಬಿಡದಿ ಪುರಸಭೆ ವ್ಯಾಪ್ತಿಯ ಭೈರವನ ದೊಡ್ಡಿ ಗ್ರಾಮದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಪೌರಾಡಳಿತ ಹಾಗೂ ಬೆಂಗಳೂರು ದಕ್ಷಿಣ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್. ಸಿ. ಬಾಲಕೃಷ್ಣ ಅವರು ಆಗಸ್ಟ್ 22ರ ಶನಿವಾರ ಶಂಕುಸ್ಥಾಪನೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಜಿ.ಎನ್. ನಟರಾಜ್ ಗಾಣಕಲ್, ಬಿಡದಿ ಪುರಸಭೆ ಮುಖ್ಯ ಅಧಿಕಾರಿ ಪ್ರಮೀಳಮ್ಮ, ಸಂಬಂಧಿಸಿದ ಇಲಾಖೆ ಅಧಿಕಾರಿಗಳು, ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ವಿವಿಧ ಅಭಿವೃದ್ಧಿ ಕೆಲಸಕ್ಕೆ ಗುದ್ದಲಿ ಪೂಜೆ



ಸೂರ್ಯಪ್ರಗತಿನ್ಯೂಸ್.ಕಾಂ

ರಾಮನಗರ : ಸುಗ್ಗನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕೆಲಸಕ್ಕೆ ಗುದ್ದಲಿಪೂಜೆ ಮತ್ತು ಹೈಮಾಸ್ಕ್ ದೀಪಗಳನ್ನು ಉದ್ಘಾಟಿಸಲಾಗಿದೆ ಎಂದು ಶಾಸಕ ಹೆಚ್.ಎ. ಇಕ್ಬಾಲ್ ಹುಸೇನ್ ತಿಳಿಸಿದರು.

ರಾಮನಗರ ತಾಲ್ಲೂಕಿನ ಕಸಬಾ ಹೋಬಳಿಯ ಸುಗ್ಗನಹಳ್ಳಿ ಗ್ರಾಪಂ ವ್ಯಾಪ್ತಿಯಲ್ಲಿ ಶಾಲೆ, ಸಮುದಾಯ ಭವನ ಅಭಿವೃದ್ಧಿ ಕಾಮಗಾರಿಗಳಿಗೆ ಶನಿವಾರ ರಾಂಪುರ ಗ್ರಾಮದಲ್ಲಿ ಗುದ್ದಲಿಪೂಜೆ ನೆರವೇರಿಸಿ ಮಾತನಾಡಿದರು.

ಸುಗ್ಗನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಾಗಲಹಳ್ಳಿ ಗ್ರಾಮದಲ್ಲಿ ಶಾಲಾ ಕಟ್ಟಡ 15 ಲಕ್ಷ, ಬಸ್ ನಿಲ್ದಾಣ 5 ಲಕ್ಷ, ರಾಂಪುರ ಸಮುದಾಯ ಭವನಕ್ಕೆ 50 ಲಕ್ಷ, ಕಟ್ಟಮಾನದೊಡ್ಡಿ ಸಮುದಾಯ ಭವನಕ್ಕೆ 50 ಲಕ್ಷ, ಲಕ್ಕನದೊಡ್ಡಿ ಗ್ರಾಮದಲ್ಲಿ ಕ್ರೈಸ್ ಕಾಲೇಜು ವಸತಿ ಶಾಲಾ ಕಟ್ಟಡಕ್ಕೆ 22 ಕೋಟಿ ವೆಚ್ಚದಲ್ಲಿ ನಡೆಯುವ ಕಾಮಗಾರಿಗೆ ಗುದ್ದಲಿಪೂಜೆ ನಡೆಸಲಾಗಿದೆ.

ರಾಂಪುರ ಮತ್ತು ಸುಗ್ಗನಹಳ್ಳಿ ಸರ್ಕಲ್‌ನಲ್ಲಿ ಹೈಮಾಸ್ಕ್ ದೀಪ 10 ಲಕ್ಷ ವೆಚ್ಚದಲ್ಲಿ ಚಾಲನೆ ಮಾಡಲಾಗಿದೆ.

ಇದಲ್ಲದೆ ಗ್ರಾಮಗಳಲ್ಲಿ ರಸ್ತೆ, ಚರಂಡಿ ಮತ್ತಿತರ ಮೂಲ ಸೌಕರ್ಯ ಅಭಿವೃದ್ಧಿಗೆ ಚಾಲನೆ ನೀಡಲಾಗಿದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ನನ್ನ ಕ್ಷೇತ್ರಕ್ಕೆ ವಿಶೇಷ ಅನುದಾನವನ್ನು ಅಭಿವೃದ್ಧಿಗೆ ನೀಡಿದ್ದಾರೆ. ಆ ಅನುದಾನದಲ್ಲಿ ವಿವಿಧ ಅಭಿವೃದ್ಧಿ ಕೆಲಸಗಳನ್ನು ಜನರ ಅಗತ್ಯಕ್ಕೆ ತಕ್ಕಂತೆ ಅವರ ಮನವಿ ಮೇರೆಗೆ ಅಭಿವೃದ್ಧಿ ಕೆಲಸಗಳಿಗೆ ಒತ್ತು ನೀಡಲಾಗಿದೆ ಎಂದರು.

ಮಾಜಿ ಸಂಸದ ಡಿ.ಕೆ. ಸುರೇಶ್, ಚಲನಚಿತ್ರ ನಟ ಸಾಧು ಕೋಕಿಲ, ಮಾಜಿ ಶಾಸಕ ಕೆ. ರಾಜು, ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ವಿ.ಹೆಚ್. ರಾಜು, ಸುಗ್ಗನಹಳ್ಳಿ ಗ್ರಾಪಂ ಮಾಜಿ ಉಪಾಧ್ಯಕ್ಷರುಗಳಾದ ಗೋವಿಂದರಾಜು, ಸುಗ್ಗನಹಳ್ಳಿ ಚಿಕ್ಕಸ್ವಾಮಿ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಮಾಯಗಾನಹಳ್ಳಿ ಎಂ. ರೇವಣ್ಣ, ಮುಖಂಡರುಗಳಾದ ಆರ್.ಕೆ. ಬೈರಲಿಂಗಯ್ಯ, ಹಾಗಲಹಳ್ಳಿ ವಾಸು, ದೊಡ್ಡವೀರೇಗೌಡ, ಕೆ. ರವಿ, ಮುಕುಂದ, ವಸಂತಕುಮಾರ್, ಸಿ. ರಾಮಯ್ಯ, ಉಮಾಶಂಕರ್, ರಾಮು, ಉಪಸ್ತಿತರಿದ್ದರು.

# ಶನಿ ಮಹಾತ್ಮ ದೇವಾಲಯದಲ್ಲಿ ಯಾವುದೇ ಅವ್ಯವಹಾರ ನಡೆದಿಲ್ಲ

ಸೂರ್ಯಪ್ರಗತಿನ್ಯೂಸ್.ಕಾಂ



ಆನೇಕಲ್: ಆನೇಕಲ್ ತಾಲ್ಲೂಕಿನ ಚಂದಾಪುರ ಸಂತೆ ಮೈದಾನದಲ್ಲಿರುವ ಶ್ರೀ ಶನಿ ಮಹಾತ್ಮ ದೇವಾಲಯದಲ್ಲಿ ಯಾವುದೇ ಅವ್ಯವಹಾರ ನಡೆದಿಲ್ಲ ಎಂದು ಶ್ರೀ ಶನೇಶ್ವರ ಸ್ವಾಮಿ ದೇವಾಲಯ ಟ್ರಸ್ಟ್‌ನ ಎಸ್.ಎಂ.ಪಿ. ಮರಿಯಣ್ಣ ಸ್ಪಷ್ಟಪಡಿಸಿದ್ದಾರೆ.

ಚಂದಾಪುರ ಗ್ರಾಮ ಪಂಚಾಯಿತಿ ಅಸ್ತಿತ್ವದಲ್ಲಿದ್ದಾಗಲೇ ಸಂತೆ ಮೈದಾನದಲ್ಲಿ ಶ್ರೀ ಶನಿ ಮಹಾತ್ಮ ದೇವಾಲಯಕ್ಕೆ ಜಾಗ ಮಂಜೂರು ಮಾಡಲಾಗಿತ್ತು. ಈ ಸಂಬಂಧ ಅಗತ್ಯ ದಾಖಲೆಗಳು ತಮ್ಮ ಬಳಿ ಇವೆ. ಅಂದಿನಿಂದ ಇಂದಿನವರೆಗೆ ದೇವಾಲಯದ ಎಲ್ಲಾ ವ್ಯವಹಾರಗಳನ್ನು ಕಾನೂನುಬದ್ಧವಾಗಿ ಟ್ರಸ್ಟ್ ಮೂಲಕ ಹಾಗೂ ಬಿಲ್‌ಗಳ ಆಧಾರದ ಮೇಲೆ ಕ್ರಮಬದ್ಧವಾಗಿ ನಿರ್ವಹಿಸಿಕೊಂಡು ಬರಲಾಗುತ್ತಿದೆ ಎಂದು ಅವರು ತಿಳಿಸಿದರು.

ದೇವರ ಹೆಸರಿನಲ್ಲಿ ಹಣ ಮಾಡುವ ಯಾವುದೇ ಉದ್ದೇಶ ಟ್ರಸ್ಟ್‌ನ ಸದಸ್ಯರಿಗೆ ಇಲ್ಲ. ದೇವಾಲಯಕ್ಕೆ ಸಂಬಂಧಿಸಿದ ದಾಖಲೆಗಳು, ಖರ್ಚು-ವೆಚ್ಚಗಳ ವಿವರ ಸೇರಿದಂತೆ ಅಗತ್ಯ ಮಾಹಿತಿಯನ್ನು ಸಾರ್ವಜನಿಕವಾಗಿ ನೀಡಲು ಟ್ರಸ್ಟ್ ಸಿದ್ಧವಾಗಿದೆ ಎಂದು ಮರಿಯಣ್ಣ ಹೇಳಿದರು.

ಪ್ರತಿ ಶನಿವಾರ ದೇವಾಲಯಕ್ಕೆ ಸಾವಿರಾರು ಭಕ್ತರು ಆಗಮಿಸುತ್ತಿದ್ದು, ಆಗಮಿಸುವ ಭಕ್ತರಿಗೆ ದಾಸೋಹದ ವ್ಯವಸ್ಥೆಯನ್ನು ಮಾಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ದೇವಾಲಯವನ್ನು ಜೀರ್ಣೋದ್ಧಾರ ಮಾಡುವ ಕನಸನ್ನು ಟ್ರಸ್ಟ್ ಹೊಂದಿದೆ ಎಂದು ಅವರು ತಿಳಿಸಿದರು.

ಕೆಲವರು ಉದ್ದೇಶಪೂರ್ವಕವಾಗಿ ದೇವಾಲಯಕ್ಕೆ ಕೆಟ್ಟ ಹೆಸರು ತರಲು ಪ್ರಯತ್ನಿಸುತ್ತಿದ್ದಾರೆ. ಭಗವಂತ ಅವರಿಗೆ ಒಳಿತನ್ನು ಮಾಡಲಿ ಎಂದು ಎಸ್.ಎಂ.ಪಿ. ಮರಿಯಣ್ಣ ಹೇಳಿದರು.ಸುದ್ದಿಗೋಷ್ಠಿಯಲ್ಲಿ ಶ್ರೀ ಶನೇಶ್ವರ ಸ್ವಾಮಿ ದೇವಾಲಯ ಟ್ರಸ್ಟ್‌ನ ನಿರ್ದೇಶಕರು, ಆಡಳಿತ ಮಂಡಳಿ ಸದಸ್ಯರು, ಟ್ರಸ್ಟ್ ಸದಸ್ಯರು ಹಾಗೂ ಚಂದಾಪುರ ಸುತ್ತಮುತ್ತಲಿನ ಗ್ರಾಮಸ್ಥರು ಭಾಗವಹಿಸಿದ್ದರು.

# ಹೆಲ್ತ್ ಸಿಟಿ ಅಭಿವೃದ್ಧಿಗೆ ಬದ್ಧ : ಡಿ.ಕೆ.ಸುರೇಶ್

ಸೂರ್ಯಪ್ರಗತಿನ್ಯೂಸ್.ಕಾಂ



ರಾಮನಗರ: ಕಳೆದ 16 ವರ್ಷದ ಹಿಂದೆ ನಿರ್ಮಾಣ ಮಾಡಲಾಗಿದ್ದು ಹೆಲ್ತ್ ಸಿಟಿ ಬಡಾವಣೆ ನಿವಾಸಿಗಳಿಗೆ ಈ ತನಕ ಹಕ್ಕು ಪತ್ರ ನೀಡುವ ಕೆಲಸ ಮಾಡಲಾಗಿರಲಿಲ್ಲ. ಈ ಸಮಸ್ಯೆಗೆ ಮುಕ್ತಿ ನೀಡಲು ರಾಜ್ಯ ಸರ್ಕಾರ ಮುಂದಾಗಿದ್ದು, ಬಡಾವಣೆಯನ್ನು ಹಂತ ಹಂತವಾಗಿ ಅಭಿವೃದ್ಧಿ ಮಾಡಲಾಗುತ್ತದೆ ಎಂದು ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್ ತಿಳಿಸಿದರು.

ನಗರದ ಹೆಲ್ತ್ ಸಿಟಿ ನಿರ್ಮಾಣವಾಗಿರುವ ಬಡಾವಣೆಯಲ್ಲಿ ಶನಿವಾರ ಹೆಲ್ತ್ ಸಿಟಿ ವಸತಿ ಬಡಾವಣೆಯ ಮರು ಅಭಿವೃದ್ಧಿ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಕಳೆದ 16 ವರ್ಷದ ಹಿಂದೆ ಈ ಬಡಾವಣೆಯನ್ನು ನಿರ್ಮಾಣ ಮಾಡಲಾಗಿತ್ತು. ಅಂದಿನಿಂದ ಈ ತನಕ ನೋಂದಣಿ ಸಹ ಆಗಿರಲಿಲ್ಲ ಎಂದರು.

ಈ ವೇಳೆ ಅನೇಕ ಸರ್ಕಾರಗಳು ರಾಜ್ಯದಲ್ಲಿ ಅಸ್ತಿತ್ವಕ್ಕೆ ಬಂದಿತು. ಅನೇಕ ನಾಯಕರು ಬಂದು ಹೋಗಿದ್ದರು. ಆದರೆ, ಬಡಾವಣೆಯಲ್ಲಿ ನಿವೇಶನ ಖರೀದಿಸಿದ ಜನತೆಗೆ ಸಮಸ್ಯೆ ಬಗೆಹರಿಸುವ ನಿಟ್ಟಿನಲ್ಲಿ ಯಾರು ಮುಂದಾಗಿರಲಿಲ್ಲ. ಜನತೆ ಸಮಸ್ಯೆ ಸೂಕ್ತ ಪರಿಹಾರ ದೊರಕಿಸಿಕೊಡಬೇಕೆಂದು ಪಣತೊಡಲಾಗಿತ್ತು. ಎಲ್ಲರ ಪ್ರಯತ್ನ ಹಾಗೂ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಸಹಾಯ ಹಸ್ತವೂ ಇಂದು ಮರು ಅಭಿವೃದ್ಧಿ ಕಾಮಗಾರಿ ನಡೆಸಲಾಗುತ್ತಿದ್ದು, ಶೀಘ್ರದಲ್ಲಿಯ ನಿವೇಶನದಾರರಿಗೆ ಹಕ್ಕು ಪತ್ರ ಹಂಚುವ ಕೆಲಸ ಮಾಡಲಾಗುತ್ತದೆ ಎಂದು ಹೇಳಿದರು.

ಕಳೆದ 16 ವರ್ಷದ ಹಿಂದೆ ಈ ಬಡಾವಣೆಯಲ್ಲಿನ ನಿವೇಶನಗಳನ್ನು ಮಾರಾಟ ಮಾಡಲಾಗಿತ್ತು. ಇದಾದ ಮೇಲೆ ಹಣ ಕೊಟ್ಟು ಖರೀದಿಸಿದವರು ಯಾರನ್ನು ಕೇಳಬೇಕು ಎನ್ನುವ ಪ್ರಶ್ನೆ ಉದ್ಭವಾಗಿತ್ತು. ಹಣ ಕೊಟ್ಟವರು ಎಲ್ಲವೂ ಮುಗಿಯಿತು ಎಂದುಕೊಂಡು ಸುಮ್ಮನಾಗಿದ್ದರು. ಖರೀದಿಸಿ ನಿವೇಶನವನ್ನು ಮಾರಾಟ ಮಾಡಲು ಅವರ ಬಳಿ ಸೂಕ್ತ ದಾಖಲೆಗಳು ಇರಲಿಲ್ಲ. ಇದನ್ನೆಲ್ಲಾ ಗಮನಿಸಿದ ನಾನು 2022ರಲ್ಲಿ ನಮ್ಮ ಸರ್ಕಾರ ರಾಜ್ಯದಲ್ಲಿ ಅಸ್ತಿತ್ವಕ್ಕೆ ಬಂದ ಮೇಲೆ ಬಡಾವಣೆ ನಿವಾಸಿಗಳ ಪರವಾಗಿ ಸಾಕಷ್ಟು ಕೆಲಸ ಮಾಡಿದ್ದೇನೆ. ಅಧಿಕಾರಿಗಳ ಮನವೊಲಿಸಿ ಅಸಾಧ್ಯವಾದದ್ದನ್ನು ಸಾಧಿಸಿದ್ದೇವೆ ಎಂದರು.

ಚನ್ನಪಟ್ಟಣದ ಬಡಾವಣೆ ಅಭಿವೃದ್ಧಿ: ಇದರೊಂದಿಗೆ ಚನ್ನಪಟ್ಟಣದ ಎರಡು ಬಡಾವಣೆಗಳು ಸೇರಿದ್ದು ಅಭಿವೃದ್ಧಿಗೊಳಿಸಲಾಗುತ್ತಿದೆ. 40 ಕೋಟಿ ವೆಚ್ಚದಲ್ಲಿ ಬಡಾವಣೆಯಲ್ಲಿ ರಸ್ತೆ, ಕುಡಿಯುವ ನೀರು, ವಿದ್ಯುತ್ ಸಂಪರ್ಕ ಚರಂಡಿ ಮಾಡಿ ಕೊಡಲಾಗುತ್ತದೆ. ಈ ಸಮಸ್ಯೆ ಬಗೆಹರಿಸಲು ಎರಡು ಬಾರಿ ಕ್ಯಾಬಿನೆಟ್ ಹೋಗಿತ್ತು. ಒಮ್ಮೆ ಇದು ರಿಜೆಕ್ಟ್ ಸಹ ಆಗಿತ್ತು. ಸತತ ಪ್ರಯತ್ನವಾದ ಬಳಿಕ ಮರು ಅಭಿವೃದ್ಧಿ ಕಾಮಗಾರಿ ಮಾಡಲಾಗುತ್ತಿದೆ ಎಂದರು.

ಹಂತ ಹಂತವಾಗಿ ಅಭಿವೃದ್ಧಿ: ಇನ್ನು ಹೆಲ್ತ್ ಸಿಟಿ ಬಡಾವಣೆಯನ್ನು ಹಂತ ಹಂತವಾಗಿ ಅಭಿವೃದ್ಧಿ ಮಾಡಲಾಗುತ್ತದೆ. ಜೊತೆಗೆ, ಜಿಲ್ಲೆ ಸಮಗ್ರ ಅಭಿವೃದ್ಧಿಗೆ ಹಾಗೂ ಗ್ರಾಮೀಣ ಹಾಗೂ ನಗರ ಜೀವನದ ಜತೆಗೆ ಅಗತ್ಯವಾಗಿ ಬೇಕಾಗಿರುವ ಎಲ್ಲಾ ಅಭಿವೃದ್ಧಿ ಕೆಲಸವನ್ನು ಮಾಡಲಾಗುತ್ತದೆ ಎಂದರು.

ಜಿಲ್ಲಾ ಉಸ್ತುವಾರಿ ಸಚಿವ ಎಚ್.ಸಿ.ಬಾಲಕೃಷ್ಣ ಮಾತನಾಡಿ, 2009-2010ರಲ್ಲಿ ರಾಮನಗರ ಕ್ಷೇತ್ರದ ಶಾಸಕರಾಗಿದ್ದ ಕುಮಾರಸ್ವಾಮಿ ಅವರು ಹೆಲ್ತ್ ಸಿಟಿ ಬಡಾವಣೆ ನಿರ್ಮಾಣ ಮಾಡಿದ್ದರು. ಆದಾದ ಬಳಿಕ ಈ ಯೋಜನೆ ಅತಂತ್ರ ಸ್ಥಿತಿಯಾಗಿದ್ದು, ತ್ರಿಶಂಕು ಸ್ಥಿತಿಯಲ್ಲಿತ್ತು. ಇಲ್ಲಿ ನಿವೇಶನ ಖರೀದಿಸಿದವರು ಅತಂತ್ರವಾಗಿದ್ದರು. ಅವರಿಗೆ ರಾಜಕೀಯ ಇಚ್ಛಾ ಶಕ್ತಿ ಇಲ್ಲ ಎಂದು ಹೆಚ್‌ಡಿಕೆ ವಿರುದ್ಧ ವಾಗ್ದಾಳಿ ನಡೆಸಿದರು.

ಡಿಕೆಶಿಗೆ ಬೈಯುವುದೇ ಛಾಳಿ : ಬೆಳಗಾದರೆ ಕುಮಾರಸ್ವಾಮಿ ಅವರು ಮೀಡಿಯಾ ಮುಂದೆ ನಿಂತು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಬೈಯುವುದನ್ನೇ ಛಾಳಿ ಮಾಡಿಕೊಂಡಿದ್ದಾರೆ ಎಂದು ಹರಿಹಾಯ್ದರು.

ನಾವು ಮನೆಯ ಮಕ್ಕಳು : ಬೆಂಗಳೂರು ದಕ್ಷಿಣ ಜಿಲ್ಲೆಯ ನಾಲ್ಕು ಶಾಸಕರು ಸಹ ಸ್ಥಳೀಯರು. ನಿಮ್ಮ ಮನೆಯ ಮಕ್ಕಳಿಗೆ ಶಕ್ತಿ ನೀಡಿದ್ದೀರಿ. ಡಿಕೆಶಿ ಸಿಎಂ ಆಗಲು ನಿಮ್ಮ ಆಶೀರ್ವಾದವೇ ಕಾರಣ. ನಾವುಗಳು ಇದೇ ಜಿಲ್ಲೆಯಲ್ಲಿ ಹುಟ್ಟಿ ಇಲ್ಲಿಯೇ ಮಣ್ಣಾಗುತ್ತೇವೆ. ಎಲ್ಲಿಂದಲೋ ಬಂದು ಇಲ್ಲಿ ಮಣ್ಣಾಗುವುದಿಲ್ಲ ಎಂದು ಪರೋಕ್ಷವಾಗಿ ಹೆಚ್‌ಡಿಕೆಯನ್ನ ಕುಟುಕಿದರು ಬಡಾವಣೆಯ ಸಮಸ್ಯೆ ಪರಿಹಾರದ ಹಿಂದೆ ಶಾಸಕ ಇಕ್ಬಾಲ್ ಹುಸೇನ್ ಅವರ ಪರಿಶ್ರಮ ಹೆಚ್ಚಾಗಿದೆ. ಕುಮಾರಸ್ವಾಮಿ ಅವರ ತಪ್ಪನ್ನು ತೊಳೆದು ಹಾಕುವ ನಿಟ್ಟಿನಲ್ಲಿ ಸಾಕಷ್ಟು ಪ್ರಯತ್ನ ಮಾಡುತ್ತಿದ್ದಾರೆ. ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಶ್ರಮಿಸುವುದಾಗಿ ತಿಳಿಸಿದರು.

ಶಾಸಕ ಇಕ್ಬಾಲ್ ಹುಸೇನ್ ಮಾತನಾಡಿ, ಕಳೆದ ಹಲವು ವರ್ಷಗಳಿಂದ ಹೆಲ್ತ್ ಸಿಟಿ ಬಡಾವಣೆ ನಿವಾಸಿಗಳು ಸಾಕಷ್ಟು ನೋವಿನಿಂದ ಇದ್ದರು, ನನ್ನನ್ನು ರಾಮನಗರ ಕ್ಷೇತ್ರದ ಶಾಸಕನಾಗಿ ಆಯ್ಕೆ ಮಾಡಿದ ಮೇಲೆ ನನ್ನ ಎದುರಿಗೆ ಇದ್ದ ಅತೀ ಕಷ್ಟದ ಕೆಲಸ ಬಡಾವಣೆಯ ಸಮಸ್ಯೆ ಬಗೆಹರಿಸುವುದು. ಕೇವಲ 2ರೂಪಾಯಿ ಪೇಪರ್ ಮೇಲೆ 7-8 ಕೋಟಿ ಬಡಾವಣೆಯ ವ್ಯವಹಾರ ಮಾಡಿದ್ದರು. ಇಂತಹ ದುಸ್ಥಿತಿಯಲ್ಲಿದ್ದ ಜನತೆಯನ್ನು ಪಾರು ಮಾಡುವ ಸಂಬಂಧ ಸಾಕಷ್ಟು ಕೆಲಸ ಮಾಡಿದ್ದೇನೆ. ನಿವೇಶನದಾರರಿಗೆ ಹಕ್ಕು ಪತ್ರ ಕೊಡಿಸಲು ಮುಂದಾಗಿದ್ದೇನೆ ಶೀಘ್ರದಲ್ಲಿಯೇ ಈ ಕೆಲಸವೂ ಆಗಲಿದೆ ಎಂದರು.

ಹಂತ ಹಂತವಾಗಿ ಬಡಾವಣೆಯ ಅಭಿವೃದ್ಧಿ ಮಾಡಲಾಗುತ್ತದೆ. ಇದರಿಂದ 1950 ಜನರಿಗೆ ನೆಲದ ಹಕ್ಕು ಸಿಗಲಿದೆ. ಈ ಸಂಬಂಧ ಅನೇಕ ಜನರ ಹೋರಾಟ ಇದೆ ಎಂದ ಅವರು, ಈ ಹಿಂದೆ ರಾಮನಗರ ಟೌನ್ ವ್ಯಾಪ್ತಿಯ ಜನತೆ ಅದರಲ್ಲೂ 1ರಿಂದ 10ನೇ ವಾರ್ಡ್ ತನಕ ಅರ್ಕಾವತಿ ನದಿಯ ಗಲೀಜು ನೀರು ಕುಡಿಯಬೇಕಿತ್ತು. ಆದರೆ , ಪರಿಸ್ಥಿತಿ ಬದಲಾಗಿದ್ದು, ಸರ್ವತೋಮುಖ ಅಭಿವೃದ್ಧಿ ಮಾಡಲಾಗಿದೆ. ಜನತೆಗೆ 24ಗಂಟೆ ಕುಡಿಯುವ ನೀರು ನೀಡಲಾಗುತ್ತಿದ್ದು, ಟೌನ್ ವ್ಯಾಪ್ತಿಯಲ್ಲಿದ್ದ 329 ಬೋರ್‌ವೆಲ್ ಕಾರ್ಯ ಮಾಡುವುದನ್ನು ನಿಲ್ಲಿಸಿದ್ದೇವೆ. ಈ ಹಿಂದೆ ಇಡೀ ಜಿಲ್ಲಾ ಕೇಂದ್ರ ಬೋರ್‌ವೆಲ್ ನೀರಿನ ಮೇಲೆ ಅವಲಂಬಿತವಾಗಿತ್ತು. ಇನ್ನು ಕೈಲಾಂಚ ಕಸಬಾ ಹೋಬಳಿಗೆ ಶುದ್ಧ ಕುಡಿಯುವ ನೀರು ನೀಡಲಾಗುತ್ತಿದೆ ಎಂದರು.

ನಿವೇಶನಕ್ಕಾಗಿ ಈ ಹಿಂದೆ 5ಸಾವಿರ ನೀಡಿ ಅರ್ಜಿ ಹಾಕಲಾಗಿತ್ತು. ಅದಕ್ಕೆ ಕಾಯಕಲ್ಪ ಕೊಡುವ ಕೆಲಸ ಆಗಲಿಲ್ಲ. ಶಿವಕುಮಾರ್ ಅವರು ರಾಜ್ಯದ ಮುಖ್ಯಮಂತ್ರಿಯಾಗಿದ್ದಾರೆ. ಅವರ ನೆರವಿನಿಂದ 300 ಎಕರೆಯಲ್ಲಿ ಜಮೀನು ಶೀಘ್ರದಲ್ಲಿಯೇ ವಸತಿ ರಹಿತರಿಗೆ ಹಂಚಿಕೆ ಮಾಡಲಾಗುತ್ತದೆ ಎಂದು ಭರವಸೆ ನೀಡಿದರು. ಈ ವೇಳೆ ಚನ್ನಪಟ್ಟಣ ಶಾಸಕ ಸಿ.ಪಿ.ಯೋಗೇಶ್ವರ್, ವಿಧಾನ ಪರಿಷತ್ ಸದಸ್ಯ ಎಸ್. ರವಿ, ಮಾಜಿ ಶಾಸಕ ಕೆ.ರಾಜು, ರಾಮ ನಗರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಚೇತನ್ ಕುಮಾರ್, ಜೆಬಿಡಿಎ ಅಧ್ಯಕ್ಷ ಗಾಣಕಲ್ ನಟರಾಜು, ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ವಿ.ಎಚ್.ರಾಜು, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಗಂಗಾಧರ್, ಪ್ರಾಧಿಕಾರದ ನಿರ್ದೇಶಕ ಪರ್ವೀಜ್, ನಟ ಸಾಧುಕೋಕಿಲ, ಕಾಂಗ್ರೆಸ್ ಮುಖಂಡ ರಮೇಶ್, ಗುರುಪ್ರಸಾದ್, ಜಿಲ್ಲಾಧಿಕಾರಿ ಯಶವಂತ್ ಗುರುಕರ್, ಜಿಪಂ ಸಿಇಒ ಜೈನ್ ಸೇರಿದಂತೆ ಹಲವರು ಇದ್ದರು.

# ರಸ್ತೆ ಸುರಕ್ಷತೆಯ ನಿಟ್ಟಿನಲ್ಲಿ ಲಾರಿ ಚಾಲಕರ ಆರೋಗ್ಯ ಅತ್ಯಂತ ಮುಖ್ಯವಾಗಿದೆ



ಅತ್ತಿಬೆಲೆ (ಆನೇಕಲ್) : ಇಲ್ಲಿಯ ಅತ್ತಿಬೆಲೆಯ ಪ್ರಾದೇಶಿಕ ಸಾರಿಗೆ ಇಲಾಖೆಯ ಕಚೇರಿ ಆವರಣದಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ಸಾರಿಗೆ ಇಲಾಖೆ, ಟೀಟ್ರೀ ಫೌಂಡೇಷನ್ ವತಿಯಿಂದ ಲಾರಿ ಚಾಲಕರಿಗೆ ಉಚಿತ ಆರೋಗ್ಯ ತಪಾಸಣೆ ಶಿಬಿರ ಮತ್ತು ವಿಮಾ ಯೋಜನೆಗಳ ಜಾಗೃತಿ ಕಾರ್ಯಕ್ರಮವನ್ನು ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸದಸ್ಯ ಡಾ.ಸಿ.ಎನ್. ಮಂಜುನಾಥ್ ಚಾಲನೆ ನೀಡಿದರು.

ಸಂಸದ ಡಾ.ಸಿ.ಎನ್.ಮಂಜುನಾಥ್ ಮಾತನಾಡಿ ಸರಕು ಸಾಗಣೆ ವಾಹನಗಳು ಸಂಚಾರ ದಿನೇ ದಿನೇ ಹೆಚ್ಚಾಗುತ್ತಿದೆ. ರಸ್ತೆ ಸುರಕ್ಷತೆಯ ನಿಟ್ಟಿನಲ್ಲಿ ಲಾರಿ ಚಾಲಕರ ಆರೋಗ್ಯ ಅತ್ಯಂತ ಮುಖ್ಯವಾಗಿದೆ. ಸಂಚಾರದ ಸಮಯದಲ್ಲಿ ಲಾರಿ ಚಾಲಕರಿಗೆ ಯಾವುದೇ ತೊಂದರೆಯಾಗದಂತೆ ನೋಡಿ ಕೊಳ್ಳಲು ಲಾರಿ ಚಾಲಕರು ಆರೋಗ್ಯ ತಪಾಸಣೆಯಲ್ಲಿ ಭಾಗಿಯಾಘಬೇಕು. ಲಾರಿ ಚಾಲಕರ ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಲು ಈ ಶಿಬಿರ ಉಪಯುಕ್ತವಾಗಿದೆ. ಒತ್ತಡ ಮುಕ್ತವಾಗಿದ್ದರೆ ರಸ್ತೆಯಲ್ಲಿ ಸಂಭವಿಸುವ ಅಪಘಾತಗಳು ಗಣನೀಯವಾಗಿ ಕಡಿಮೆಯಾಗುತ್ತದೆ ಎಂದರು.

ಲಾರಿ ಚಾಲಕರು ನಿರಂತರವಾಗಿ ವಾಹನ ಸಂಚಾಲಿಸುವುದರಿಂದ ಚಾಲಕರಲ್ಲಿ ಆಯಾಸ, ನಿದ್ರಾಹೀನತೆ, ಕಣ್ಣಿನ ದೃಷ್ಟಿ ಸಮಸ್ಯೆ, ರಕ್ತದೊತ್ತಡ ಸೇರಿದಂತೆ ವಿವಿಧ ಆರೋಗ್ಯ ಸಮಸ್ಯೆಗಳು ಕಂಡು ಬರುತ್ತವೆ. ಆರೋಗ್ಯ ಸಮಸ್ಯೆಯಿಂದಾಗಿ ಲಾರಿ ಚಾಲಕರಲ್ಲಿ ಏಕಾಗ್ರತೆ ಕಡಿಮೆಯಾಗುತ್ತದೆ. ಇದರಿಂದಾಗಿ ಅಪಘಾತಗಳು ಸಂಭವಿಸುವ ಸಾಧ್ಯತೆಯಿರುತ್ತದೆ. ಹಾಗಾಗಿ ಲಾರಿ ಚಾಲಕರು ತಮ್ಮ ಆರೋಗ್ಯ ಸುಧಾರಣೆಯತ್ತ ಗಮನ ವಹಿಸಬೇಕು. ಲಾರಿ ವಾಹನ ಸವಾರರು ಸೇರಿದಂತೆ ಪ್ರತಿಯೊಬ್ಬ ವಾಹನ ಕಡ್ಡಾಯವಾಗಿ ರಸ್ತೆ ನಿಯಮಗಳನ್ನು ಪಾಲಿಸಬೇಕು ಎಂದರು.

ಕೇಂದ್ರ ಸರ್ಕಾರದ ಅಭಯ್ ಸಾರಥಿ ಯೋಜನೆಯಡಿಯಲ್ಲಿ ಆರು ತಿಂಗಳ ಕಾಲ ಆರೋಗ್ಯ ತಪಾಸಣಾ ಶಿಬಿರ, ವಿಮೆಗಳ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಶಿಬಿರದಲ್ಲಿ ರಸ್ತೆ ಸುರಕ್ಷತೆ, ಕಾನೂನು ಜಾಗೃತಿ, ಯೋಗ, ಸಾಮಾಜಿಕ ಭದ್ರತೆಯ ಬಗ್ಗೆ ಜಾಗೃತಿ ಮೂಡಿಸಲಾಗುವುದು. ಕೇಂದ್ರ ಸರ್ಕಾರದ ಯೋಜನೆಗಳಾದ ಇ-ಶ್ರಮ್, ಆಯುಷ್ಮಾನ್ ಭಾರತ್, ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆ, ಪ್ರಧಾನ ಮಂತ್ರಿ ಸುರಕ್ಷ ಬೀಮಾ ಯೋಜನೆ, ಅಭಯ್ ಸುರಕ್ಷ ಯೋಜನೆಯ ಬಗ್ಗೆ ಲಾರಿ ಚಾಲಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಪ್ರತಿಯೊಬ್ಬ ಲಾರಿ ಮಾಲೀಕರು ತಮ್ಮ ವಾಹನಗಳಿಗೆ ಕಡ್ಡಾಯವಾಗಿ ವಿಮೆ ಸೌಲಭ್ಯ ಮಾಡಿಸಿಕೊಳ್ಳಬೇಕು ಎಂದರು.

ಇತ್ತೀಚಿನ ದಿನಗಳಲ್ಲಿ ಭಾರತದಲ್ಲಿ ಒತ್ತಡದಿಂದಾಗಿ ಕಾಯಿಲೆಗಳು ಹೆಚ್ಚಾಗುತ್ತಿವೆ. ಜೀವನ ಶೈಲಿಯ ಬದಲಾವಣೆ, ಸರಿಯಾದ ಆಹಾರ ಸೇವಿಸದೇ ಇರುವುದುರಿಂದ ಕಾಯಿಲೆಗಳು ಹೆಚ್ಚಾಗುತ್ತಿದೆ. ಆರೋಗ್ಯ ಸಮಸ್ಯೆಯಿಂದ ದೂರವಿರಲು ಪ್ರತಿಯೊಬ್ಬರು ಕಡ್ಡಾಯವಾಗಿ ಒಂದು ಘಂಟೆ ವ್ಯಾಯಾಮ, ಕ್ರೀಡೆ, ಯೋಗಾಭ್ಯಾಸ ನಡೆಸಬೇಕು. ವಾಯು ಮಾಲಿನ್ಯದ ಕಾರಣದಿಂದಾಗಿ ಹೃದಯ ಸಮಸ್ಯೆಗಳು ಹೆಚ್ಚಾಗುತ್ತಿದೆ. ಹಾಗಾಗಿ ವಾಯು ಮಾಲಿನ್ಯವನ್ನು ತಡೆಯಲು ಕೊಡುಗೆ ನೀಡಬೇಕು ಎಂದರು. ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿ ನಾಸೀರ್ ಅಹಮದ್, ಇನ್‌ಸ್ಪೆಕ್ಟರ್ ಅನಿಲಕ್ ಕುಮಾರ್, ಟೀಟ್ರಿ ಆಸ್ಪತ್ರೆಯ ವ್ಯವಸ್ಥಾಪಕ ಜಿ.ಸಿ.ರಾಜು, ಅಭಯ್ ಹೆಲ್ತ್ ಕ್ಯಾಂಪ್‌ನ ಮಾತೃಶ್ರೀ ಶೆಟ್ಟಿ, ಕನ್ನಡ ಜಾಗೃತಿ ವೇದಿಕೆಯ ರಾಜ್ಯ ಘಟಕದ ಅಧ್ಯಕ್ಷ ಮಂಜುನಾಥ ದೇವ, ಯುವ ಘಟಕದ ಅಧ್ಯಕ್ಷ ಸಿಂಗೇನಅಗ್ರಹಾರ ಗೌರೀಶ್, ಜೈಭೀಮ್ ಜನಜಾಗೃತಿ ವೇದಿಕೆಯ ರಾಜ್ಯಾಧ್ಯಕ್ಷ ಚಿನ್ನಪ್ಪ.ವೈ.ಚಿಕ್ಕಹಾಗಡೆ, ಮುಖಂಡರಾದ ಗುಡ್ಡಹಟ್ಟಿ ರಾಮಸ್ವಾಮಿ, ಚಂದಾಪುರ ಶ್ರೀಧರ್, ಸುರೇಶ್, ಮುನಿರಾಜು, ಬಳಗಾರನಹಳ್ಳಿ ಕುಮಾರ್, ಕೆ.ನಾಗರಾಜ್, ಜಾವೇದ್ ಇದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಶೋಷಿತ ಸಮುದಾಯದ ಮಕ್ಕಳು ವಿದ್ಯಾವಂತರಾಗಬೇಕು ; ಶಿಕ್ಷಣ ಮಾತ್ರ ಸಮಾಜವನ್ನು ಬದಲಾಯಿಸಲು ಸಾಧ್ಯ

ಸೂರ್ಯಪ್ರಗತಿನ್ಯೂಸ್.ಕಾಂ





ಚಿಂತಾಮಣಿ : ಶೋಷಿತ ಸಮುದಾಯಗಳ ಮಕ್ಕಳು ವಿದ್ಯಾವಂತರಾಗಬೇಕು. ಒಂದೊತ್ತು ಊಟ ಕಡಿಮೆಯಾದರೂ ಚಿಂತೆ ಇಲ್ಲ. ನಮ್ಮ ಮಕ್ಕಳನ್ನು ವಿದ್ಯಾವಂತರನ್ನಾಗಿಸುತ್ತೇವೆ ಎಂಬ ಸಂಕಲ್ಪ ಮಾಡಬೇಕು ಎಂದು ಉಪಮುಖ್ಯಮಂತ್ರಿಗಳಾದ ಡಾ. ಜಿ.ಪರಮೇಶ್ವರ ಅವರು ಹೇಳಿದರು.

ಅವರು ಇಂದು ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ನಗರದಲ್ಲಿ ನೂತನವಾಗಿ ನಿರ್ಮಿಸಲಾದ ಡಾ. ಬಿ.ಆರ್. ಅಂಬೇಡ್ಕರ್ ಭವನ - ಅನುಭವ ಕೇಂದ್ರ ಹಾಗೂ ಭಗವಾನ್ ಬುದ್ಧರ ಪುತ್ಥಳಿ, ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಪುತ್ಥಳಿ ಮತ್ತು ಡಿಜಿಟಲ್ ಅಧ್ಯಯನ ಕೇಂದ್ರವನ್ನು ಲೋಕಾರ್ಪಣೆಗೊಳಿಸಿದ ಬಳಿಕ ಮಾತನಾಡಿ, ಶಿಕ್ಷಣ ಮಾತ್ರ ನಮ್ಮನ್ನು ಬದಲಾಯಿಸುತ್ತದೆ. ಪ್ರತಿಯೊಬ್ಬರೂ ಶಿಕ್ಷಣ ಪಡೆದುಕೊಳ್ಳುವಂತೆ ಪ್ರೇರೇಪಿಸಿದರು.

ಚಿಂತಾಮಣಿ ತಾಲೂಕಿನಲ್ಲಿ ಡಾ. ಬಿ.ಆರ್.ಅಂಬೇಡ್ಕರ್ ಭವನ - ಅನುಭವ ಕೇಂದ್ರವನ್ನು ನಿರ್ಮಿಸುವ ಮೂಲಕ ಡಾ. ಎಂ.ಸಿ.ಸುಧಾಕರ್ ಅವರು ಇತಿಹಾಸ ಸೃಷ್ಟಿಸಿದ್ದಾರೆ. ಇಡೀ ರಾಜ್ಯದಲ್ಲಿ ಬೆಂಗಳೂರು ನಗರ ಸೇರಿದಂತೆ ಎಲ್ಲಿಯೂ ಇಂತಹ ಅಂಬೇಡ್ಕರ್ ಭವನ ನೋಡಿಲ್ಲ. ಅಂಬೇಡ್ಕರ್ ಅವರ ಸಾಧನೆ ಮತ್ತು ಇತಿಹಾಸವನ್ನು ಅರ್ಥೈಸುವುದು ಅಷ್ಟು ಸುಲಭದ ಕೆಲಸವಲ್ಲ. ಆ ಕೆಲಸವನ್ನು ಇಲ್ಲಿ ಮಾಡಲಾಗಿದೆ. ಶಾಲಾ ಮಕ್ಕಳ ಕಲಿಕೆಗೆ ಅಂಬೇಡ್ಕರ್ ಅನುಭವ ಕೇಂದ್ರ, ಡಿಜಿಟಲ್ ಅಧ್ಯಯನ ಕೇಂದ್ರ ಅನುಕೂಲವಾಗಲಿದೆ. ಡಾ.ಎಂ.ಸಿ. ಸುಧಾಕರ್ ಅವರ ಹೆಸರು ಚಿಂತಾಮಣಿಯ ಇತಿಹಾಸದಲ್ಲಿ ಉಳಿಯಲಿದೆ. ನೀವೆಲ್ಲರೂ ಅವರ ಜೊತೆ ನಿಲ್ಲಬೇಕು ಎಂದರು. ಅಂಬೇಡ್ಕರ್ ಅವರು ಅತ್ಯಂತ ಬಡ ಕುಟುಂಬದಲ್ಲಿ ಜನಿಸಿದವರು. ಎಲ್ಲ ಕಷ್ಟಗಳನ್ನು ಮೀರಿ ಪದವಿ ಪಡೆದುಕೊಂಡರು. ಹೊರದೇಶದಲ್ಲಿ ವ್ಯಾಸಂಗ ಮಾಡಿದ ದಲಿತ ಸಮುದಾಯಕ್ಕೆ ಸೇರಿದ ಭಾರತದ ಮೊದಲ ವ್ಯಕ್ತಿ ಬಾಬಾ ಸಾಹೇಬ್ ಅಂಬೇಡ್ಕರ್. ಆ ಕಾಲಘಟ್ಟದಲ್ಲಿ ಪ್ರಪಂಚದಲ್ಲಿ ಆರು ಜನರನ್ನು ಜ್ಞಾನಿಗಳು ಎಂದು ಹೇಳಲಾಗುತ್ತದೆ. ಅದರಲ್ಲಿ ಬಾಬಾ ಸಾಹೇಬರು ಕೂಡ ಒಬ್ಬರು. ಕೊಲಂಬಿಯಾ ವಿಶ್ವವಿದ್ಯಾಲಯದಲ್ಲಿ ಭಾರತವನ್ನು ಬದಲಾಯಿಸುವಂತ ಜ್ಞಾನ ಸಂಪಾದನೆ ಮಾಡಿದ್ದಾರೆ ಎಂದು ಹೇಳಿದರು.

ಇಂದು ಭಾರತ ಪ್ರಪಂಚದ 4ನೇ ಆರ್ಥಿಕ ರಾಷ್ಟ್ರವಾಗಿ ಬೆಳೆದಿದೆ. ನಾವೆಲ್ಲ ಆರ್ಥಿಕ ಸ್ವಾವಲಂಬಿಗಳಾಗುತ್ತಿರುವುದಕ್ಕೆ ಬಾಬಾ ಸಾಹೇಬರಿಗೆ ಆ ಕೀರ್ತಿ ಸಲ್ಲಬೇಕು. ರಿಸರ್ವ್ ಬ್ಯಾಂಕ್ ಕೂಡ ಬಾಬಾ ಸಾಹೇಬರು ಕೊಟ್ಟ ಕೊಡುಗೆ. ಮಹಿಳೆಯರ ಪ್ರಾತಿನಿಧ್ಯಕ್ಕೆ ಮೊದಲು ಒತ್ತು ನೀಡಿದವರು ಅಂಬೇಡ್ಕರ್. ಮಹಿಳೆಯರಿಗೆ ಸಮಾನತೆ ಕಲ್ಪಿಸಲು ಹಿಂದೂ ಕೋಡ್ ಬಿಲ್ ತಂದರು. ಅಂತಹ ಮಹಾನ್ ನಾಯಕನ ಫೋಟೋವನ್ನು ಇಟ್ಟುಕೊಂಡು ಭಾರತ ದೇಶದ ಪ್ರತಿಯೊಬ್ಬ ಹೆಣ್ಣುಮಗಳು ಪೂಜೆ ಮಾಡಬೇಕು ಎಂದರು.

ಮುಂದುವರೆದು, ಯಾವ ದೇಶಗಳು ಕೂಡ ಸಮಾನತೆ, ನ್ಯಾಯ, ಭ್ರಾತೃತ್ವವನ್ನು ಸಂವಿಧಾನದಲ್ಲಿ ಬರೆದಿಡುವ ಕೆಲಸ ಮಾಡಿಲ್ಲ. ಈ ಮೂರು ಅಂಶಗಳು ಇಲ್ಲವಾಗಿದ್ದರೆ ಪ್ರಜಾಪ್ರಭುತ್ವಕ್ಕೆ ಅರ್ಥ ಬರುತ್ತಿರಲಿಲ್ಲ. ನಮ್ಮವರನ್ನು ಆಯ್ಕೆ ಮಾಡುವ ಮತ್ತು ಪ್ರತಿನಿಧಿಸುವ ಹಕ್ಕು ನಮ್ಮವರಿಗೆ ಸಿಗಬೇಕು ಎಂಬುದನ್ನು ಬಾಬಾ ಸಾಹೇಬ್‌ರು ಒತ್ತಾಯಿಸಿದರು. ಈ ಕುರಿತು ಮಹಾತ್ಮ ಗಾಂಧೀಜಿಯವರೊಂದಿಗೆ ಸಂವಾದ ನಡೆಸಿದರು. ಅಂಬೇಡ್ಕರ್ ಅವರ ದಾರಿಯಲ್ಲಿ ನಾವು ನಡೆದರೆ, ಸ್ವಾಭಿಮಾನ, ಸಮಾನತೆ ಮತ್ತು ಭ್ರಾತೃತ್ವ ಬರುತ್ತದೆ. ನಾವೆಲ್ಲ ಅಂಬೇಡ್ಕರ್ ಅವರ ಹಾದಿಯಲ್ಲಿ ಸಾಗೋಣ ಎಂದು ಕರೆ ನೀಡಿದರು.

ಪ್ರಸ್ತುತ ಸಮಾಜ ಯಾವ ರೀತಿ ಇದೆ ಎಂಬುದನ್ನು ನಾವು ನೋಡುತ್ತಿದ್ದೇವೆ. ಶೋಷಿತ ಸಮಾಜಕ್ಕೆ ಸೇರಿದವರು ವಿದ್ಯಾವಂತರಾಗಿದ್ದಾರೆ, ಅಧಿಕಾರಿಗಳಾಗಿದ್ದಾರೆ, ಮಂತ್ರಿಗಳಾಗಿದ್ದಾರೆ. ಆದರೆ, ಸಮಾಜ ಶೋಷಿತ ಸಮುದಾಯಗಳನ್ನು ಈವರೆಗೂ ಒಪ್ಪಲಿಲ್ಲ ಎಂಬುದಕ್ಕೆ ಇತ್ತೀಚೆಗೆ ಮಲ್ಲಿಕಾರ್ಜುನ ಖರ್ಗೆ ಅವರ ವಿಚಾರದಲ್ಲಿ ನಡೆದ ಘಟನೆಯೇ ಸಾಕ್ಷಿ. ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರು ಭೇಟಿ ನೀಡಿದ ಸ್ಥಳವನ್ನು ಶುದ್ಧೀಕರಿಸಿ ಸಮಾಜಕ್ಕೆ ಯಾವ ಸಂದೇಶ ನೀಡಲು ಹೊರಟಿದ್ದಾರೆ ಎಂಬುದು ಅರ್ಥವಾಗುತ್ತಿಲ್ಲ. ಬಾಬು ಜಗಜೀವನ್ ರಾಮ್ ಅವರು ಬನಾರಸ್ ವಿಶ್ವವಿದ್ಯಾಲಯಕ್ಕೆ ಭೇಟಿ ನೀಡಿದ ನಂತರವೂ ಶುದ್ಧೀಕರಣ ಮಾಡಿದ್ದರು. ಇಂತಹ ತಪ್ಪಿನ ನಡೆಗಳನ್ನು ಯಾರೊಬ್ಬರು ಖಂಡಿಸಲಿಲ್ಲ. ನಾವೆಲ್ಲರೂ ಇನ್ನಾದರೂ ಎಚ್ಚೆತ್ತುಕೊಳ್ಳಬೇಕು ಎಂದು ತಿಳಿಸಿದರು.

ಶೋಷಿತ ಸಮುದಾಯಗಳಿಗೆ ಬದಲಾವಣೆ ತರಬೇಕು ಎಂದು ಹೋರಾಟ ಮಾಡಿಕೊಂಡು ಬಂದಿದ್ದೇವೆ. ದೇಶದಲ್ಲಿ ಮೊಟ್ಟ ಮೊದಲ ಬಾರಿಗೆ ಎಸ್‌ಸಿಎಸ್‌ಪಿ / ಟಿಎಸ್‌ಪಿ ತಂದಿರುವುದು ಕರ್ನಾಟಕ. ಈ ಕಾಯ್ದೆ ತರುವ ಮೂಲಕ ಸಿದ್ದರಾಮಯ್ಯ ಅವರು ನಮ್ಮೆಲ್ಲರ ಮನಸ್ಸಿನಲ್ಲಿ ಉಳಿದಿದ್ದಾರೆ. ನಾವೆಲ್ಲರೂ ಬಾಬಾ ಸಾಹೇಬರು ಹಾಕಿದ ದಾರಿಯಲ್ಲಿ ನಡೆದು ಬದಲಾವಣೆ ತರುವ ಪ್ರಯತ್ನ ಮಾಡುತ್ತಿದ್ದೇವೆ ಎಂದರು.

ಎಂ.ಸಿ. ಸುಧಾಕರ್ ಅವರು ಭವಿಷ್ಯದ ನಾಯಕ. ಅವರಿಗೆ ಸಾಕಷ್ಟು ಅವಕಾಶಗಳಿವೆ. ಸುಧಾಕರ್ ಅವರ ತಂದೆ ಚೌಡರೆಡ್ಡಿ ಅವರ ಜೊತೆಯಲ್ಲಿ ನಾನು ಕೆಲಸ ಮಾಡಿದ್ದೇನೆ. ಅವರ ಮನಸ್ಸು ಹೇಗಿದೆ ಎಂಬುದನ್ನು ಅರ್ಥ ಮಾಡಿಕೊಂಡಿದ್ದೇನೆ ಎಂದರು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಸಚಿವರಾದ ಕೆ.ಹೆಚ್.ಮುನಿಯಪ್ಪ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾದ ಈಶ್ವರ ಖಂಡ್ರೆ, ಮಾಜಿ ಸಚಿವರಾದ ಡಾ. ಹೆಚ್.ಸಿ.ಮಹದೇವಪ್ಪ, ಡಾ. ಎಂ.ಸಿ.ಸುಧಾಕರ್, ಸಂಸದರಾದ ಎಂ. ಮಲ್ಲೇಶ್ ಬಾಬು, ವಿಧಾನ ಪರಿಷತ್ ಸದಸ್ಯರಾದ ಎಂ.ಎಲ್.ಅನೀಲ್ ಕುಮಾರ್, ಡಿ.ಟಿ.ಶ್ರೀನಿವಾಸ್, ಜಿಲ್ಲಾಧಿಕಾರಿಗಳಾದ ಪ್ರಭು ಜಿ, ಜಿಲ್ಲಾ ಪಂಚಾಯತ್ ಸಿಇಒ ಡಾ. ನವೀನ್ ಭಟ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಶಲ್ ಚೌಕ್ಸೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಸದನದಲ್ಲಿ ಗಲಾಟೆ ಮಾಡಲು ನೀತಿಗಳಿವೆ, ನಿಯಮಗಳಿವೆ.



ಈಗಾಗಲೇ ನಾನು 102 ತಾಲೂಕುಗಳಲ್ಲಿ ಬರಪೀಡಿತ ಪ್ರದೇಶಗಳನ್ನು ಅವಲೋಕನ ನಡೆಸುವಂತೆ ಸೂಚಿಸಿದ್ದೇನೆ. ಇನ್ನೆರಡು ದಿನದಲ್ಲಿ ವರದಿ ಬರುತ್ತದೆ. ಆ ಬಳಿಕ ಸಮಗ್ರವಾಗಿ ಗಮನಿಸಿ ಬರ ಪೀಡಿತ ಪ್ರದೇಶವನ್ನು ಘೋಷಣೆ ಮಾಡುತ್ತೇವೆ. ಆ ಬಳಿಕ ಕೇಂದ್ರ ಸರ್ಕಾರಕ್ಕೂ ಕೂಡ ವಿಸ್ತೃತ ವರದಿಯನ್ನು ಸಲ್ಲಿಸುತ್ತೇವೆ ಎಂದು ತಿಳಿಸಿದರು.

ವಿಧಾನಮಂಡಲ ಅಧಿವೇಶನದಲ್ಲಿ ವಿಪಕ್ಷದವರು ಪ್ರತಿಭಟನೆ ನಡೆಸುತ್ತಿರುವ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಡಿಸಿಎಂ, ಸದನದಲ್ಲಿ ಪ್ರತಿಭಟನೆ ಮಾಡುವುದು ವಿಪಕ್ಷದವರ ಹಕ್ಕು. ಆದರೆ, ಅದಕ್ಕೆ ರೀತಿ ನೀತಿಗಳಿವೆ, ನಿಯಮಗಳಿವೆ. ಪ್ರಶ್ನೆಗಳನ್ನು ಕೇಳಬಹುದು. ಉತ್ತರ ಕೊಟ್ಟು ಸಮರ್ಥನೆ ನೀಡುತ್ತೇವೆ. ಪ್ರತಿಭಟನೆ ಮಾಡೋದು ಸರಿಯಲ್ಲ. ರಾಜ್ಯದಲ್ಲಿ ಜ್ವಲಂತ ಸಮಸ್ಯೆಗಳಿವೆ. ಬರ ಇದೆ. ಈ ಬಗ್ಗೆ ಚರ್ಚೆಗಳು ನಡೆಯಬೇಕು. ವಿಪಕ್ಷದವರು ಇದಕ್ಕೆ ಸಹಕರಿಸಬೇಕು ಎಂದು ನಮ್ಮ ಸರ್ಕಾರ ಮತ್ತು ಸಭಾಧ್ಯಕ್ಷರು ಮನವಿ ಮಾಡಿದ್ದಾರೆ. ಅದರ ಮೇಲೂ ರಾಜಕೀಯ ಮಾಡುತ್ತೇವೆ ಎಂದರೆ ನಾವೇನು ಮಾಡಲು ಆಗುವುದಿಲ್ಲ. ನಿಜವಾದ ಸಮಸ್ಯೆಗಳ ಬಗ್ಗೆ ಚರ್ಚಿಸಲು ಅವರಿಗೆ ಆಸಕ್ತಿಯಿಲ್ಲ ಎಂದರು.

